ಸಂಪುಟ : 11 ಸಂಚಿಕೆ: 118 ಪುಟ : 4+2 ಬೆಲೆ: 3.00 ಗುರುವಾರ ಜೂನ್ 11 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 118 Pages : 4+2 Price : 3.00 Thursday june 11 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜೂನ್ 30ರಿಂದ ಮನೆ-ಮನೆ ಸಮೀಕ್ಷೆ; 53 ಸಾವಿರ ಮತದಾರರ ಪತ್ತೆಗೆ ವಿಶೇಷ ಕಾರ್ಯಾಚರಣೆ- ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಮತದಾರರ ಪಟ್ಟಿಗೆ ಮಹಾ ಸರ್ಜರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಾದ್ಯಂತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಪ್ರಕ್ರಿಯೆ ಚುರುಕುಗೊಂಡಿದ್ದು, ಈಗಾಗಲೇ ಶೇ.94.14ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್.ಐ.ಆರ್ ಕುರಿತು ರಾಜ್ಯಾದ್ಯಂತ ಚರ್ಚೆಗಳು ನಡೆಯುತ್ತಿರುವ ಹಿನ್ನೆಲೆ ಸಾರ್ವಜನಿಕರಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಪಾರದರ್ಶಕವಾಗಿ ಪ್ರಕ್ರಿಯೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಜೂನ್ 30ರಿಂದ ಮನೆ-ಮನೆ ಸಮೀಕ್ಷೆ

ಕಳೆದ ಆರು ತಿಂಗಳಿಂದ ಎಸ್.ಐ.ಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಸಿದ್ಧತೆ ನಡೆಸಲಾಗಿದೆ. ಚುನಾವಣಾ ಆಯೋಗದ ಮಾರ್ಗಸೂಚಿಯಂತೆ 2002ರ ಮತದಾರರ ಪಟ್ಟಿಯನ್ನು ಮಾನದಂಡವನ್ನಾಗಿ ಮಾಡಿಕೊಂಡು, ಪ್ರಸ್ತುತ 2025ರ ಮತದಾರರ ಪಟ್ಟಿಯೊಂದಿಗೆ ಹೋಲಿಕೆ ಹಾಗೂ ಮ್ಯಾಪಿಂಗ್ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ವಿವರಿಸಿದರು.

ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಈಗಾಗಲೇ ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಜಿಲ್ಲೆಯ ಒಟ್ಟು 9,04,994 ಮತದಾರರಲ್ಲಿ 8,51,991 ಮತದಾರರನ್ನು ಗುರುತಿಸಿ ಕುಟುಂಬ ಲಿಂಕೇಜ್‌ನೊಂದಿಗೆ ಮ್ಯಾಪಿಂಗ್ ಮಾಡಲಾಗಿದೆ ಎಂದರು.



ಜೂನ್ 20ರಿಂದ 29ರವರೆಗೆ ಪೂರ್ವಸಿದ್ಧತೆ, ತರಬೇತಿ ಹಾಗೂ ಮುದ್ರಣ ಕಾರ್ಯ ನಡೆಯಲಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಬಿಎಲ್‌ಒಗಳು ಮನೆ-ಮನೆಗೆ ಭೇಟಿ ನೀಡಿ ಗಣತಿ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ಬಳಿಕ ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದೆ ಎಂದರು.

ಜಿಲ್ಲೆಯ ಮತದಾರರ ಪಟ್ಟಿಯಲ್ಲಿ ಇನ್ನೂ ಪತ್ತೆಯಾಗದ 53,004 ಮತದಾರರ ಕುರಿತು ವಿಶೇಷ ಪರಿಶೀಲನೆ ಕೈಗೊಳ್ಳಲಾಗುತ್ತಿದೆ. ಕೆಲವರು ಮೃತಪಟ್ಟಿರಬಹುದು, ವಲಸೆ ಹೋಗಿರಬಹುದು ಅಥವಾ ಹೆಸರು ಎರಡು ಬಾರಿ ಸೇರ್ಪಡೆಯಾಗಿರಬಹುದು. ಆದರೆ ಯಾರ ಹೆಸರನ್ನೂ ಏಕಾಏಕಿ ತೆಗೆದುಹಾಕುವುದಿಲ್ಲ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದರು.

ಪತ್ತೆಯಾಗದ ಮತದಾರರಿಗೆ ನೋಟಿಸ್ ನೀಡಿ ಪರಿಶೀಲನೆ ನಡೆಸಲಾಗುವುದು. ವಿಶೇಷ ಕಾರ್ಯಾಚರಣೆಯ ಮೂಲಕ ಪ್ರತಿಯೊಬ್ಬರನ್ನೂ ಪತ್ತೆ ಹಚ್ಚಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಮುಂದಿನ ಹಂತದಲ್ಲಿ ಪ್ರತಿಯೊಬ್ಬ ಮತದಾರರ ಮನೆಗೆ ಬಿಎಲ್‌ಒಗಳು ಅರ್ಧದಷ್ಟು ಮಾಹಿತಿ ಭರ್ತಿಯಾಗಿರುವ ಗಣತಿ ನಮೂನೆ ತಲುಪಿಸಲಿದ್ದಾರೆ. ಅದರಲ್ಲಿ ಮತದಾರರ ಹೆಸರು, ಎಪಿಕ್ ಸಂಖ್ಯೆ, ಸಂಬಂಧಿಕರ ವಿವರ ಹಾಗೂ ವಿಧಾನಸಭಾ ಕ್ಷೇತ್ರದ ಮಾಹಿತಿ ನಮೂದಿರುತ್ತದೆ.

ಬಿಎಲ್‌ಒಗಳು ಕನಿಷ್ಠ ಮೂರು ಬಾರಿ ಮನೆಗಳಿಗೆ ಭೇಟಿ ನೀಡಿ ನಮೂನೆ ವಿತರಿಸಲಿದ್ದು, ಮತದಾರರು ಮಾಹಿತಿಯನ್ನು ಪರಿಶೀಲಿಸಿ ಸಹಿ ಮಾಡಿ ಕಡ್ಡಾಯವಾಗಿ ಮರಳಿ ನೀಡಬೇಕು. ಇಲ್ಲದಿದ್ದರೆ ಹೆಸರು ಕೈಬಿಡುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ರಾಜಕೀಯ ಪಕ್ಷಗಳು ಕೂಡ ಬೂತ್ ಮಟ್ಟದ ಏಜೆಂಟರನ್ನು ನೇಮಕ ಮಾಡಿ ಎಸ್.ಐ.ಆರ್ ಪ್ರಕ್ರಿಯೆಗೆ ಸಹಕರಿಸಬೇಕು ಎಂದು ಕೋರಿದರು.

2002ರ ಮತದಾರರ ಪಟ್ಟಿಯಲ್ಲಿ ಕುಟುಂಬದ ಮುಖ್ಯಸ್ಥರ ಹೆಸರು ಇದ್ದರೆ, ಕುಟುಂಬದ ಇತರ ಸದಸ್ಯರ ಸೇರ್ಪಡೆ ಸುಲಭವಾಗಲಿದೆ. ಮದುವೆ ಅಥವಾ ವಲಸೆ ಕಾರಣದಿಂದ ಹೊಸದಾಗಿ ನೆಲೆಸಿರುವವರಿಗೆ ಕುಟುಂಬ ಲಿಂಕೇಜ್ ಇಲ್ಲದಿದ್ದರೆ ಅಗತ್ಯ ದಾಖಲೆಗಳ ಆಧಾರದಲ್ಲಿ ಹೆಸರು ಸೇರ್ಪಡೆ ಮಾಡಲಾಗುತ್ತದೆ ಎಂದರು.

ಗುರುತಿನ ಚೀಟಿ, ಪಿಂಚಣಿ ಆದೇಶ, ಜನನ ಪ್ರಮಾಣ ಪತ್ರ, ಪಾಸ್‌ಪೋರ್ಟ್, ಎಸ್‌ಎಸ್‌ಎಲ್‌ಸಿ ಪ್ರಮಾಣ ಪತ್ರ, ಶಾಶ್ವತ ನಿವಾಸ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಕುಟುಂಬ ನೋಂದಣಿ, ಭೂಮಿ ಅಥವಾ ಮನೆ ಹಂಚಿಕೆ ದಾಖಲೆ ಸೇರಿದಂತೆ ವಿವಿಧ ದಾಖಲೆಗಳನ್ನು ಸಲ್ಲಿಸಬಹುದಾಗಿದೆ. ಆಧಾರ್ ಕಾರ್ಡ್ ಅನ್ನು ಗುರುತಿನ ಪುರಾವೆಯಾಗಿ ಮಾತ್ರ ಪರಿಗಣಿಸಲಾಗುತ್ತದೆ ಎಂದು ಹೇಳಿದರು.

ಚುನಾವಣೆ ಆಯೋಗದ ನಿಯಮಾವಳಿಯಂತೆ ಒಂದು ಮತಗಟ್ಟೆಗೆ ಗರಿಷ್ಠ 1,200 ಮತದಾರರ ಮಿತಿ ನಿಗದಿಯಾಗಿದ್ದು, ಹೆಚ್ಚಿನ ಮತದಾರರಿರುವ ಪ್ರದೇಶಗಳಲ್ಲಿ ಹೊಸ ಮತಗಟ್ಟೆ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಜುಲೈ 29ರೊಳಗೆ ಮರುಹಂಚಿಕೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಚುನಾವಣಾ ಶಾಖೆಯ ತಹಶೀಲ್ದಾರ್ ಸಂತೋಷಕುಮಾರ ಹಿರೇಮಠ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

> “ಅರ್ಹ ಯಾವೊಬ್ಬ ಮತದಾರನೂ ಮತಪಟ್ಟಿಯಿಂದ ಹೊರಗುಳಿಯಬಾರದು. ಮತದಾನದ ಹಕ್ಕಿನಿಂದ ಯಾರೂ ವಂಚಿತರಾಗಬಾರದು ಎಂಬುದು ನಮ್ಮ ಪ್ರಮುಖ ಉದ್ದೇಶ”
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

#### ಅಕ್ಟೋಬರ್ 7ಕ್ಕೆ ಅಂತಿಮ ಮತಪಟ್ಟಿ

ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದ್ದು, ಅಕ್ಟೋಬರ್ 3ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಇರುತ್ತದೆ. ಆಕ್ಷೇಪಣೆಗಳ ಪರಿಶೀಲನೆ ಬಳಿಕ ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟವಾಗಲಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

## ಸೌಲಭ್ಯಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ರೈತರಿಗೆ 2026-27ನೇ ಸಾಲಿನ ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಡಿ ಪ್ರೋತ್ಸಾಹಧನ ಹಾಗೂ ಸಹಾಯಧನ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ, ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಯೋಜನೆ ಹಾಗೂ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಗಳಡಿ ವಿವಿಧ ಕಾರ್ಯಕ್ರಮಗಳಿಗೆ ಘಟಕವಾರು ಪ್ರತ್ಯೇಕ ಅರ್ಜಿ ಸಲ್ಲಿಸಬಹುದಾಗಿದೆ. ಸಾಮಾನ್ಯ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರು ನಿಗದಿತ ಅರ್ಜಿ ನಮೂನೆ, ಚಾಲ್ತಿ ಪಹಣಿ (RTC) ಹಾಗೂ ಆಧಾರ್ ಕಾರ್ಡ್ ಪ್ರತಿಯೊಂದಿಗೆ ಅರ್ಜಿ ಸಲ್ಲಿಸಬಹುದು. ರೈತ ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಇಲಾಖೆ ತಿಳಿಸಿದೆ. ಆಯಾ ಯೋಜನೆಗಳ ಮಾರ್ಗಸೂಚಿ ಹಾಗೂ ಮಾನದಂಡಗಳನ್ವಯ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು ಜೂನ್ 17 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ಅಧಿಕಾರಿ, ರೈತ ಸಂಪರ್ಕ ಕೇಂದ್ರ, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ (ಜಿ.ಪಂ.) ಕಚೇರಿಯನ್ನು ಸಂಪರ್ಕಿಸಬಹುದು.

### ಉತ್ತರ ಕರ್ನಾಟಕಕ್ಕೆ ನ್ಯಾಯ ಕೊಡಬೇಕೆಂದು ಜಮಾತ್ ಮುಖಂಡರ ಆಗ್ರಹ

# ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ಕೊಡದಿದ್ದರೆ ಉಪವಾಸ ಸತ್ಯಾಗ್ರಹ!

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿರುವ ಹಿರಿಯ ನಾಯಕ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸಂಪುಟದ ಎರಡನೇ ಹಂತದ ವಿಸ್ತರಣೆಯಲ್ಲಿ ಸಚಿವ ಸ್ಥಾನ ನೀಡಬೇಕು. ಇಲ್ಲದಿದ್ದರೆ ಉಪವಾಸ ಸತ್ಯಾಗ್ರಹ ನಡೆಸಲಾಗುವುದು ಎಂದು ಬಿಸ್ಮಿಲ್ಲಾ ಜಮಾತ್ ಮುಖಂಡ ಅಬೂಬುಕರ್ ಅಣ್ಣಿಗೇರಿ ಎಚ್ಚರಿಕೆ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕ ಭಾಗಕ್ಕೆ ಸಮರ್ಪಕ ಪ್ರಾತಿನಿಧ್ಯ ಸಿಗಬೇಕಾದರೆ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡುವುದು ಅನಿವಾರ್ಯ ಎಂದು ಹೇಳಿದರು.

ರಫೀಕ್ ಅಬ್ಬಿಗೇರಿ ಮಾತನಾಡಿ, ಎಚ್.ಕೆ. ಪಾಟೀಲ ಅವರು ಗದಗ ಜಿಲ್ಲೆಯಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದು, ತಮ್ಮ ರಾಜಕೀಯ ಜೀವನದಲ್ಲಿ ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಜನಪರವಾಗಿ ಸೇವೆ ಸಲ್ಲಿಸಿದ್ದಾರೆ ಎಂದು ಹೇಳಿದರು.



ಭಾಷಾ ಮಲ್ಲಸಮುದ್ರ ಮಾತನಾಡಿ, ಎಚ್.ಕೆ. ಪಾಟೀಲ ಅವರು ಈ ಹಿಂದೆ ಹಲವು ಸಚಿವ ಸ್ಥಾನಗಳನ್ನು ಸಮರ್ಥವಾಗಿ ನಿರ್ವಹಿಸಿರುವ ಅನುಭವಿ ನಾಯಕರು. ಉತ್ತರ ಕರ್ನಾಟಕದ ಪ್ರಭಾವಿ ನಾಯಕರಿಗೆ ಸಚಿವ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜಾಖಾನ್ ಪಠಾಣ್, ಸಮೀರ್, ರಾಜಸಾಬ್, ದಾವಲಸಾಬ್ ಮುರಡಿ, ಶರೀಫಸಾಬ್ ನದಾಫ್ ಸೇರಿದಂತೆ ಜಮಾತ್ ಮುಖಂಡರು ಉಪಸ್ಥಿತರಿದ್ದರು.

> “ಉತ್ತರ ಕರ್ನಾಟಕದ ಅನುಭವಿಗಳಾದ ನಾಯಕರನ್ನು ಸಚಿವ ಸಂಪುಟದಲ್ಲಿ ಕಡೆಗಣಿಸುವುದು ಸರಿಯಲ್ಲ”
> – ಅಬೂಬುಕರ್ ಅಣ್ಣಿಗೇರಿ

### ಜಿ.ಎಸ್. ಪಾಟೀಲರು ಸಚಿವರಾಗುವವರೆಗೂ ಕ್ಷೌರ ಬೇಡ ಎಂದ ಶಿವರಾಜ ಮುಗಳಿ

# ಸಚಿವಗಿರಿಯ ಕನಸಿಗೆ ಅಭಿಮಾನಿಯ ಹರಕೆ

■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ದೊರೆಯಬೇಕೆಂದು ಸಮೀಪದ ಜಕ್ಕಲಿ ಗ್ರಾಮದ ಕಾಂಗ್ರೆಸ್ ಕಾರ್ಯಕರ್ತ ಶಿವರಾಜ ಮುಗಳಿ ವಿಶೇಷ ಹರಕೆ ಹೊತ್ತಿದ್ದಾರೆ.

ಜಿ.ಎಸ್. ಪಾಟೀಲರು ಸಚಿವರಾಗುವವರೆಗೆ ಗಡ್ಡ, ಮೀಸೆ ಹಾಗೂ ತಲೆಯ ಕೂದಲನ್ನು ಕತ್ತರಿಸಿಕೊಳ್ಳುವುದಿಲ್ಲ ಎಂದು ಸಂಕಲ್ಪ ಮಾಡಿರುವ ಶಿವರಾಜ ಮುಗಳಿ, ಬಳಿಕ ಧರ್ಮಸ್ಥಳಕ್ಕೆ ತೆರಳಿ ಶ್ರೀ ಮಂಜುನಾಥ ಸ್ವಾಮಿಯ ಸನ್ನಿಧಿಯಲ್ಲಿ ಹರಕೆ ತೀರಿಸುವುದಾಗಿ ತಿಳಿಸಿದ್ದಾರೆ.

ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲರು ಕ್ಷೇತ್ರದ ಅಭಿವೃದ್ಧಿ, ರೈತರ ಸಮಸ್ಯೆಗಳ ಪರಿಹಾರ ಹಾಗೂ ಜನಸಂಪರ್ಕದ ಮೂಲಕ ಜನರ ವಿಶ್ವಾಸ ಗಳಿಸಿದ್ದು, ಸಚಿವ ಸ್ಥಾನಕ್ಕೆ ಅರ್ಹರು ಎಂಬ ಅಭಿಪ್ರಾಯ ಕಾರ್ಯಕರ್ತರಲ್ಲಿದೆ.

ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಚರ್ಚೆಗಳು ಜೋರಾಗಿರುವ ಬೆನ್ನಲ್ಲೇ ರೋಣ ಕ್ಷೇತ್ರದಲ್ಲಿ ಅಭಿಮಾನಿಗಳ ನಿರೀಕ್ಷೆ ಹೆಚ್ಚಾಗಿದ್ದು, ವಿವಿಧ ರೀತಿಯಲ್ಲಿ ಬೆಂಬಲ ವ್ಯಕ್ತವಾಗುತ್ತಿದೆ.



### ಕೋವಿಡ್ ಸಂಕಷ್ಟದಲ್ಲೂ ಕಾರ್ಮಿಕರ ಜೊತೆ ನಿಂತ ನಾಯಕ ಎಚ್.ಕೆ. ಪಾಟೀಲ

# ಸಚಿವ ಸ್ಥಾನಕ್ಕೆ ಎಚ್.ಕೆ. ಪರ ಕಾರ್ಮಿಕರ ಧ್ವನಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ಗದಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ದೂರದೃಷ್ಟಿಯ ನಾಯಕತ್ವ ಅಗತ್ಯವಿದ್ದು, ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿರುವ ಹಿರಿಯ ನಾಯಕ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಜಿಲ್ಲಾ ಪೈಂಟರ್ಸ್ ಸಂಘದ ಅಧ್ಯಕ್ಷ ರಿಯಾಜ್ ಹೆಸರೂರು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೋವಿಡ್ ಲಾಕ್‌ಡೌನ್ ಸಂದರ್ಭದಲ್ಲಿ ಕೆಲಸವಿಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದ ಕಾರ್ಮಿಕ ವರ್ಗದ ನೆರವಿಗೆ ನಿಂತು ಮಾನವೀಯ ನಾಯಕತ್ವ ತೆ-ೋರಿದ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವುದು ನ್ಯಾಯಸಮ್ಮತ ಎಂದು ಹೇಳಿದರು.



ರಾಜಕೀಯ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿರುವ ಎಚ್.ಕೆ. ಪಾಟೀಲ ಅವರು ಜಿಲ್ಲೆಯ ಅಭಿವೃದ್ಧಿಗೆ ಅನೇಕ ಕೊಡುಗೆಗಳನ್ನು ನೀಡಿದ್ದಾರೆ. ಅಂತಹ ಅನುಭವಿ ನಾಯಕರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಎಂದು ಸಂಘದ ಮುಖಂಡರು ಆಗ್ರಹಿಸಿದರು.

ದಾವಲಸಾಬ್ ಮಕರಬ್ಬಿ ಮಾತನಾಡಿ, ಜಿಲ್ಲೆಯ ಸಮಸ್ಯೆಗಳ ಅರಿವು ಇರುವ ನಾಯಕರು ಸರ್ಕಾರದಲ್ಲಿ ಇದ್ದರೆ ಮಾತ್ರ ಅಭಿವೃದ್ಧಿಗೆ ವೇಗ ಸಿಗುತ್ತದೆ. ಆದ್ದರಿಂದ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ವಿರೇಶ ಜುಂಜಾಲ, ಗೋಪಾಲ ಸಿಂಗ್ ರಜಪೂತ್, ಮಾರುತಿ ಕಾತರಕಿ, ದಾದಾಪೀರ ಕಟ್ಟಿಮನಿ, ಅಕ್ರಮ್ ಕುಂದಗೋಳ, ಸಲ್ಮಾನ್ ಬಬರ್ಚಿ, ಮಹಮ್ಮದ್ ರಫಿ, ಶರಣಪ್ಪ ಸೊರಟೂರು, ಇಬ್ರಾಹಿಂ ಇಲಕಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> “ಗದಗ ಜಿಲ್ಲೆಯ ಅಭಿವೃದ್ಧಿಗೆ ಅನುಭವ ಹಾಗೂ ದೂರದೃಷ್ಟಿ ಹೊಂದಿರುವ ಎಚ್.ಕೆ. ಪಾಟೀಲರಂತಹ ನಾಯಕರು ಸರ್ಕಾರದಲ್ಲಿ ಇರಬೇಕು”
> – ರಿಯಾಜ್ ಹೆಸರೂರು

# ಸಿ.ಇ.ಟಿ.ಯಲ್ಲಿ ಸನ್ಮಾರ್ಗ ಕಾಲೇಜಿನ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆ ನಡೆಸುತ್ತಿರುವ ಸನ್ಮಾರ್ಗ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು 2025–26ನೇ ಸಾಲಿನ ಸಿ.ಇ.ಟಿ. ಪರೀಕ್ಷೆಯಲ್ಲಿ ಗಮನಾರ್ಹ ಸಾಧನೆ ಮಾಡಿ ಕಾಲೇಜಿನ ಕೀರ್ತಿಯನ್ನು ಮತ್ತಷ್ಟು ಎತ್ತರಕ್ಕೇರಿಸಿದ್ದಾರೆ.

ಕುಮಾರ ರಜತ ತೆಂಬದಮನಿ 2831ನೇ ರ್‍ಯಾಂಕ್ ಪಡೆದು ಕಾಲೇಜಿಗೆ ಪ್ರಥಮನಾಗಿದ್ದು, ಅನನ್ಯಾ ಜೋಶಿ 4593ನೇ, ಕಿರಣ ಹಿರೇಮಠ 5636ನೇ, ಶಿವರಾಮಚೈತನ್ಯಾ ಕುಲಕರ್ಣಿ 9281ನೇ ಹಾಗೂ ಆರ್ಯನ್ ಬಗಾಡೆ 11294ನೇ ರ್‍ಯಾಂಕ್ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ವಿಜ್ಞಾನ ವಿಭಾಗದ ಉಪನ್ಯಾಸಕ ಸಿಬ್ಬಂದಿಯ ಶ್ರಮ ಶ್ಲಾಘನೀಯವಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪುನೀತ ದೇಶಪಾಂಡೆ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಹಾಗೂ ನಿರ್ದೇಶಕರಾದ ರೋಹಿತ್ ಒಡೆಯರ, ರಾಹುಲ ಒಡೆಯರ ಮತ್ತು ಸೈಯ್ಯದ ಮತಿನ್ ಮುಲ್ಲಾ ಅಭಿನಂದಿಸಿ ಶುಭ ಹಾರೈಸಿದ್ದಾರೆ.

# ಬಾಕಿ ದಂಡ ಪಾವತಿಗೆ ಶೇ.50 ರಿಯಾಯಿತಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರಿಗೆ ಇಲಾಖೆಯಲ್ಲಿ 1991ರ ಏಪ್ರಿಲ್ 1ರಿಂದ 2022ರ ಮಾರ್ಚ್ 31ರವರೆಗೆ ದಾಖಲಾಗಿದ್ದು, ಇನ್ನೂ ಪಾವತಿಗೆ ಬಾಕಿಯಿರುವ ಪ್ರಕರಣಗಳ ದಂಡ ಮೊತ್ತಕ್ಕೆ ಶೇಕಡಾ 50ರಷ್ಟು ರಿಯಾಯಿತಿ ನೀಡಲಾಗಿದೆ.

ಜೂನ್ 21ರಿಂದ ಜುಲೈ 10ರವರೆಗೆ ಈ ವಿಶೇಷ ಸೌಲಭ್ಯ ಲಭ್ಯವಿದ್ದು, ಸಾರ್ವಜನಿಕರು ಬಾಕಿಯಿರುವ ಡಿ.ಎಸ್.ಎ ಪ್ರಕರಣಗಳ ದಂಡವನ್ನು ರಿಯಾಯಿತಿ ದರದಲ್ಲಿ ಪಾವತಿಸಿ ಪ್ರಯೋಜನ ಪಡೆಯಬಹುದಾಗಿದೆ ಎಂದು ಸಾರಿಗೆ ಇಲಾಖೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದೇವಾಲಯಗಳು ಕೇವಲ ಭಕ್ತಿಯ ಕೇಂದ್ರಗಳಲ್ಲ, ಭಾರತೀಯ ಸಂಸ್ಕೃತಿಯ ಜೀವಂತ ಗ್ರಂಥಗಳು” – ಬಿ.ಎ. ಕೆಂಚರಡ್ಡಿ

# ಕಲ್ಲಿನಲ್ಲಿ ಕೆತ್ತಿದ ರಾಮಾಯಣಕ್ಕೆ ಕನ್ನಡದ ಹೊಸ ಭಾಷ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ದೇವಾಲಯಗಳ ಗೋಡೆಗಳಲ್ಲಿ ಕೆತ್ತಲ್ಪಟ್ಟ ರಾಮಾಯಣ, ಮಹಾಭಾರತ ಮತ್ತು ಪಂಚತಂತ್ರದ ಕಥಾನಕ ಶಿಲ್ಪಗಳು ನಮ್ಮ ಸಂಸ್ಕೃತಿ, ಪರಂಪರೆ ಮತ್ತು ಇತಿಹಾಸದ ಜೀವಂತ ದಾಖಲೆಗಳಾಗಿದ್ದು, ಅವುಗಳ ಕುರಿತು ಹೆಚ್ಚಿನ ಅಧ್ಯಯನ, ದಾಖಲೀಕರಣ ಹಾಗೂ ಪ್ರಚಾರ ನಡೆಯಬೇಕಿದೆ ಎಂದು ಚಿಂತಕ ಬಿ.ಎ. ಕೆಂಚರಡ್ಡಿ ಹೇಳಿದರು.

ನಗರದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಕಾರ್ಯಾಲಯದಲ್ಲಿ ಜಿಲ್ಲಾ ಕಸಾಪ ಹಾಗೂ ಕರ್ನಾಟಕ ಇತಿಹಾಸ ಅಕಾಡೆಮಿ ಸಹಯೋಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪುಂಡಲೀಕ ಕಲ್ಲಿಗನೂರ ಅವರ ‘ಶಿಲ್ಪಕಲೆಯಲ್ಲಿ ರಾಮಾಯಣ’ ಕೃತಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಭಾರತೀಯ ಕಲಾ ಪರಂಪರೆಯಲ್ಲಿ ಕಥಾನಕ ಶಿಲ್ಪಗಳು ವಿಶಿಷ್ಟ ಸ್ಥಾನ ಹೊಂದಿದ್ದು, ವಿವಿಧ ಕಾಲಘಟ್ಟಗಳಲ್ಲಿ ದೇವಾಲಯಗಳ ಭಾಗಗಳಲ್ಲಿ

> “ಶಿಲ್ಪಕಲೆಯಲ್ಲಿ ರಾಮಾಯಣ ಕೃತಿ ಕಲಾಸಕ್ತರು, ಸಂಶೋಧಕರು ಹಾಗೂ ಸಾಹಿತ್ಯಾಸಕ್ತರಿಗೆ ಆಕರ ಗ್ರಂಥವಾಗಲಿದೆ”
> – ಡಾ. ದತ್ತಪ್ರಸನ್ನ ಪಾಟೀಲ



ಮೂಡಿಬಂದ ರಾಮಾಯಣ ಶಿಲ್ಪಗಳು ಭಾರತೀಯ ಸಂಸ್ಕೃತಿಯ ವೈಭವವನ್ನು ಜಗತ್ತಿಗೆ ಪರಿಚಯಿಸುತ್ತವೆ. ಇಂತಹ ಶಿಲ್ಪಗಳನ್ನು ಆಧರಿಸಿ ಕನ್ನಡದಲ್ಲಿ ಸಚಿತ್ರ ಕೃತಿ ಹೊರಬಂದಿರುವುದು ಮಹತ್ವದ ಬೆಳವಣಿಗೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪುಸ್ತಕ ಪರಿಚಯಿಸಿದ ಕಲಾ ಇತಿಹಾಸ ಸಂಶೋಧಕ ಹಾಗೂ ಕರ್ನಾಟಕ ಇತಿಹಾಸ ಅಕಾಡೆಮಿಯ ಕೇಂದ್ರ ಕಾರ್ಯಕಾರಿ ಮಂಡಳಿ ಸದಸ್ಯ ಡಾ. ದತ್ತಪ್ರಸನ್ನ ಪಾಟೀಲ ಮಾತನಾಡಿ, ರಾಮಾಯಣವು ಸಾಹಿತ್ಯ, ಸಂಗೀತ, ಶಿಲ್ಪ ಸೇರಿದಂತೆ ಅನೇಕ ಕಲೆಗಳ ಮೇಲೆ ಆಳವಾದ ಪ್ರಭಾವ ಬೀರಿದೆ ಎಂದರು.

ಬೇಲೂರು, ಹಳೇಬೀಡು, ಅಮೃತಪುರ, ನುಗ್ಗೆಹಳ್ಳಿ ಸೇರಿದಂತೆ ಹೊಯ್ಸಳರ ಕಾಲದ ದೇವಾಲಯಗಳು ಹಾಗೂ ವಿಜಯನಗರ ಕಾಲದ ಶೃಂಗೇರಿಯ ವಿದ್ಯಾಶಂಕರ ಮತ್ತು ಹಜಾರ ರಾಮಚಂದ್ರ ದೇವಸ್ಥಾನಗಳಲ್ಲಿನ ರಾಮಾಯಣ ಶಿಲ್ಪಗಳನ್ನು ಒಂದೇ ಕೃತಿಯಲ್ಲಿ ಛಾಯಾಚಿತ್ರಗಳೊಂದಿಗೆ ದಾಖಲಿಸಿರುವುದು ಈ ಪುಸ್ತಕದ ವಿಶೇಷತೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ದೇವಾಲಯಗಳು ಕೇವಲ ಧಾರ್ಮಿಕ ಕೇಂದ್ರಗಳಲ್ಲ, ಅವು ಸಮಾಜದ ಸಂಸ್ಕೃತಿ ಮತ್ತು ನೈತಿಕ ಮೌಲ್ಯಗಳನ್ನು ಉಳಿಸುವ ಪಾಠಶಾಲೆಗಳಾಗಿವೆ ಎಂದರು.

> “ಇಂತಹ ಕೃತಿಗಳು ದೇವಾಲಯಗಳನ್ನು ನೋಡುವ ದೃಷ್ಟಿಕೋನವೇ ಬದಲಿಸುತ್ತವೆ. ಪ್ರವಾಸೋದ್ಯಮಕ್ಕೂ ಹೊಸ ಆಯಾಮ ನೀಡುತ್ತವೆ”
> – ಬಿ.ಎ. ಕೆಂಚರಡ್ಡಿ

ಮೌಖಿಕ ಪರಂಪರೆ ಪ್ರಬಲವಾಗಿದ್ದ ಕಾಲದಲ್ಲಿ ದೇವಾಲಯದ ಶಿಲ್ಪಗಳು ಜನರಿಗೆ ನೈತಿಕ ಮೌಲ್ಯ ಬೋಧಿಸುವ ಮಾಧ್ಯಮವಾಗಿದ್ದವು. ಸ್ಥಳೀಯ ಸಂಸ್ಕೃತಿ ಮತ್ತು ಇತಿಹಾಸವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ನಿಟ್ಟಿನಲ್ಲಿ ಜಿಲ್ಲಾವಾರು ಸಮಾಜ ವಿಜ್ಞಾನ ಪಠ್ಯಪುಸ್ತಕ ರೂಪಿಸುವ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಲೇಖಕ ಪುಂಡಲೀಕ ಕಲ್ಲಿಗನೂರ, ಕರ್ನಾಟಕ ಇತಿಹಾಸ ಅಕಾಡೆಮಿ ಅಧ್ಯಕ್ಷ ಡಾ. ವಾಯ್.ಆರ್. ಬೇಲೇರಿ ಮಾತನಾಡಿದರು.

ಈ ವೇಳೆ ಹೆಸರಾಂತ ಶಿಲ್ಪಿ ರಾಘವೇಂದ್ರಾಚಾರ್ಯ ಶಿಲ್ಪಿ, ಛಾಯಾಚಿತ್ರಗ್ರಾಹಕ ಮುತ್ತು ಹಾಳಕೇರಿ, ನಿವೃತ್ತ ಪ್ರಾಚಾರ್ಯ ಡಾ. ವಿ.ಕೆ. ದ್ಯಾಮನಗೌಡರ ಹಾಗೂ ಆರ್.ಎನ್. ಭಂಡಾರಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಕಲಾಪ್ರೇಮಿಗಳು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಪಾಲ್ಗೊಂಡಿದ್ದರು.

### ಕೋರ್ಟ್ ತಡೆಯಾಜ್ಞೆ ಬೆನ್ನಲ್ಲೇ ಅಧಿಕಾರಿಗಳ ಯೂ–ಟರ್ನ್

# ಸೀಜ್ ಮಾಡಿದ ಅಂಗಡಿಗಳನ್ನೇ ಮತ್ತೆ ತೆರೆದ ಪುರಸಭೆ!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಸ್ ನಿಲ್ದಾಣದ ಸಮೀಪ ಇರುವ ಪುರಸಭೆಯ ವಾಣಿಜ್ಯ ಮಳಿಗೆಗಳನ್ನು ಸೀಜ್ ಮಾಡಿದ್ದ ಪುರಸಭೆ ಅಧಿಕಾರಿಗಳು, ಕೋರ್ಟ್ ತಡೆಯಾಜ್ಞೆ ಹಿನ್ನೆಲೆ ಮತ್ತೆ ಸೀಲ್ ತೆರವುಗೊಳಿಸಿ ಅಂಗಡಿಗಳನ್ನು ತೆರೆಯಲು ಅವಕಾಶ ನೀಡಿದ ಘಟನೆ ಬುಧವಾರ ನಡೆದಿದೆ.

ವಾಣಿಜ್ಯ ಮಳಿಗೆಗಳ ಗುತ್ತಿಗೆ ಅವಧಿ ಮುಗಿದಿರುವ ಹಿನ್ನೆಲೆಯಲ್ಲಿ ಹೊಸದಾಗಿ ಟೆಂಡರ್ ಕರೆದು ಹರಾಜು ಪ್ರಕ್ರಿಯೆ ನಡೆಸಬೇಕು. ಅಲ್ಲದೆ, ಎಗ್ ರೈಸ್ ಹಾಗೂ ಚಿಕನ್ ಮಾರಾಟ ಅಂಗಡಿಗಳನ್ನು ತೆರವುಗೊಳಿಸಬೇಕು ಎಂದು ವಿವಿಧ ಕನ್ನಡಪರ ಸಂಘಟನೆಗಳು ಮಂಗಳವಾರ ಪ್ರತಿಭಟನೆ ನಡೆಸಿದ್ದವು. ಪ್ರತಿಭಟನೆಯ ಒತ್ತಡಕ್ಕೆ ಮಣಿದ ಪುರಸಭೆ ಅಧಿಕಾರಿಗಳು ಸಂಬಂಧಿಸಿದ ಅಂಗಡಿಗಳನ್ನು ಸೀಜ್ ಮಾಡಿದ್ದರು.

ಈ ನಡುವೆ ಅಂಗಡಿ ಮಾಲೀಕರು ಹಾಗೂ ಕೆಲವು ಸಂಘಟನೆಗಳ ಮುಖಂಡರು, ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಿಂದ ತಡೆಯಾಜ್ಞೆ (ಸ್ಟೇ) ಪಡೆದಿದ್ದರೂ ಪುರಸಭೆ ಅಧಿಕಾರಿಗಳು ಕಾನೂನುಬಾಹಿರವಾಗಿ ಅಂಗಡಿಗಳನ್ನು ಸೀಜ್ ಮಾಡಿದ್ದಾರೆ ಎಂದು ಆರೋಪಿಸಿದರು.

ಕರವೇ ಪ್ರವೀಣ ಶೆಟ್ಟಿ ಬಣದ



> “ಮೊದಲು ನ್ಯಾಯಾಲಯದ ತಡೆಯಾಜ್ಞೆ ರದ್ದುಪಡಿಸಿಕೊಂಡು ಬಳಿಕ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಹೋರಾಟ ಅನಿವಾರ್ಯ”
> – ಮಹೇಶ ಕಲಘಟಗಿ

ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ ಕಲಘಟಗಿ ಹಾಗೂ ಡಿಎಸ್ಎಸ್ ಮುಖಂಡ ಸುರೇಶ ನಂದೆಣ್ಣವರ ಮಾತನಾಡಿ, “ಉಚ್ಚ ನ್ಯಾಯಾಲಯದ ಆದೇಶ ಜಾರಿಯಲ್ಲಿದ್ದರೂ ಅಂಗಡಿಗಳನ್ನು ಯಾವ ಆಧಾರದ ಮೇಲೆ ಸೀಜ್ ಮಾಡಲಾಗಿದೆ?” ಎಂದು ಪ್ರಶ್ನಿಸಿದರು.

ಚಿಕನ್ ಹಾಗೂ ಮಟನ್ ಮಾರಾಟದ ಬಗ್ಗೆ ನಮಗೂ ಆಕ್ಷೇಪವಿದೆ. ಆದರೆ ಕಾನೂನು ಪ್ರಕ್ರಿಯೆ ಅನುಸರಿಸದೆ ಏಕಾಏಕಿ ವ್ಯಾಪಾರಸ್ಥರ ಜೀವನೋಪಾಯಕ್ಕೆ ಧಕ್ಕೆ ತರುವುದು ಸರಿಯಲ್ಲ ಎಂದು ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

ಇದರಿಂದ ಎಚ್ಚೆತ್ತ ಪುರಸಭೆ ಅಧಿಕಾರಿಗಳು ಪೊಲೀಸ್ ಬಂದೋಬಸ್ತ್‌ನೊಂದಿಗೆ ವಾಣಿಜ್ಯ ಸಂಕೀರ್ಣಕ್ಕೆ ಆಗಮಿಸಿ, ಕಂದಾಯ ಅಧಿಕಾರಿ ಸುರೇಶ ಪೂಜಾರ ಹಾಗೂ ವ್ಯವಸ್ಥಾಪಕಿ ಮಂಜುಳಾ ಹೂಗಾರ ನೇತೃತ್ವದಲ್ಲಿ ಅಂಗಡಿಗಳ ಸೀಲ್ ತೆರವುಗೊಳಿಸಿದರು.

ಅಂಗಡಿಗಳು ಪುನರಾರಂಭಗೊಂಡ ಹಿನ್ನೆಲೆಯಲ್ಲಿ ವ್ಯಾಪಾರಸ್ಥರು ಹರ್ಷ ವ್ಯಕ್ತಪಡಿಸಿದರು.

ಕ್ರೈಂ ವಿಭಾಗದ ಪಿಎಸ್ಐ ಟಿ.ಕೆ. ರಾಠೋಡ್ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿ ಬಿಗಿ ಬಂದೋಬಸ್ತ್ ಒದಗಿಸಿದ್ದರು. ಬಸವರಾಜ ಹೊಗೆಸೊಪ್ಪಿನ, ಅನೀಲ ಮುಳಗುಂದ, ಬಸವಣ್ಣೆಪ್ಪ ನಂದೆಣ್ಣವರ, ಶಿವು ಕರಡಿ ಸೇರಿದಂತೆ ಹಲವಾರು ವ್ಯಾಪಾರಸ್ಥರು ಈ ವೇಳೆ ಉಪಸ್ಥಿತರಿದ್ದರು.

### ವ್ಯಾಪಾರ ದ್ರೋಹದ ಚಿಂತನೆ ಆಗದೆ, ದ್ರವ್ಯ ಸೃಷ್ಟಿಯ ಚಿಂತನೆ ಆಗಬೇಕು – ಅಂಬಾಡಿ ಮಹೇಶ್

# ರೈತರ ಹಿತ ಕಾಪಾಡುವ ಸಂಘಗಳೇ ನಿಜವಾದ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಯಾವುದೇ ಸಂಘ–ಸಂಸ್ಥೆಗಳು ಕೇವಲ ಸದಸ್ಯರ ಹಿತಕ್ಕಷ್ಟೇ ಸೀಮಿತವಾಗದೆ ರೈತರ ಹಾಗೂ ಸಮಾಜದ ಹಿತವನ್ನು ಕಾಪಾಡುವ ದಿಸೆಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಆಹಾರ ಧಾನ್ಯ ವರ್ತಕರ ಸಂಘದ ನೂತನ ಅಧ್ಯಕ್ಷ ಅಂಬಾಡಿ ಮಹೇಶ್ ಹೇಳಿದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿ ಆಯೋಜಿಸಿದ್ದ ಆಹಾರ ಧಾನ್ಯ ವರ್ತಕರ ಸಂಘದ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಸಂಘಟನೆಗಳು ಸದುದ್ದೇಶ ಮತ್ತು ಒಗ್ಗಟ್ಟಿನ ಮೂಲಮಂತ್ರದೊಂದಿಗೆ ಕೆಲಸ ಮಾಡಿದಾಗ ಮಾತ್ರ ಯಾವುದೇ ಸವಾಲುಗಳನ್ನು ಯಶಸ್ವಿಯಾಗಿ ಎದುರಿಸಲು ಸಾಧ್ಯವಾಗುತ್ತದೆ ಎಂದರು.

ವ್ಯಾಪಾರದಲ್ಲಿ ಎದುರಾಗುವ



> “ವ್ಯಾಪಾರ ದ್ರೋಹದ ಚಿಂತನೆ ಆಗದೆ, ದ್ರವ್ಯ ಸೃಷ್ಟಿಯ ಚಿಂತನೆ ಆಗಬೇಕು”
> – ಅಂಬಾಡಿ ಮಹೇಶ್

ಸಮಸ್ಯೆಗಳನ್ನು ಜಾಣ್ಮೆಯಿಂದ ನಿಭಾಯಿಸುವ ಸಾಮರ್ಥ್ಯ ಪ್ರತಿಯೊಬ್ಬ ವರ್ತಕರಲ್ಲಿರಬೇಕು. ಪಟ್ಟಣದಲ್ಲಿ ಬಲಿಷ್ಠ ಚೇಂಬರ್ ಆಫ್ ಕಾಮರ್ಸ್ ಇದ್ದು, ಅದು ಎಲ್ಲಾ ವ್ಯಾಪಾರಿಗಳ ಹಿತವನ್ನು ಕಾಪಾಡಲು ಸದಾ ಸಿದ್ಧವಾಗಿದೆ. ಹಿರಿಯ ವರ್ತಕರ ಅನುಭವ ಮತ್ತು ಮಾರ್ಗದರ್ಶನದಿಂದ ಸಂಘ ಇನ್ನಷ್ಟು ಯಶಸ್ಸಿನ ಹಾದಿಯಲ್ಲಿ ಸಾಗಲಿದೆ ಎಂದು ತಿಳಿಸಿದರು.

ಚೇಂಬರ್ ಆಫ್ ಕಾಮರ್ಸ್‌ನ ಹಿರಿಯ ವರ್ತಕರಾದ ಅಕ್ಕಿ ಶಿವಣ್ಣ ಮಾತನಾಡಿ, ಪಟ್ಟಣದ ಇತರೆ ಸಂಘಗಳಿಗಿಂತ ಆಹಾರ ಧಾನ್ಯ ವರ್ತಕರ ಸಂಘ ಹೆಚ್ಚು ಒಗ್ಗಟ್ಟನ್ನು ಹೊಂದಿದ್ದು, ಹಿರಿಯ ವರ್ತಕರ ಪರಿಶ್ರಮದಿಂದಲೇ ಈ ಹಂತಕ್ಕೆ ಬೆಳೆದಿದೆ ಎಂದು ಹೇಳಿದರು.

ನಿಕಟ ಪೂರ್ವ ಉಪಾಧ್ಯಕ್ಷ ಬಸವರಾಜ್ ಮಾತನಾಡಿ, ಜೀವನದಲ್ಲಿ ಯಶಸ್ಸು ಸಾಧಿಸಲು ಶ್ರಮ, ಶಿಸ್ತು ಮತ್ತು ಗುರಿ ಮುಖ್ಯ. ಉದಯಿಸುವ ಸೂರ್ಯ, ಓಡುವ ಸಪ್ತ ಕುದುರೆಗಳು, ದುಡಿಯುವ ಕತ್ತೆ ಹಾಗೂ ನರಿಗಳ ಚಿತ್ರಗಳು ಜೀವನದ ಪಾಠಗಳನ್ನು ಸಾರುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ವರ್ತಕರನ್ನು ನೂತನ ಅಧ್ಯಕ್ಷ ಅಂಬಾಡಿ ಮಹೇಶ್ ಹಾಗೂ ನಿಕಟ ಪೂರ್ವ ಅಧ್ಯಕ್ಷ ಶ್ರೀಧರ ಶೆಟ್ರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ನೂತನ ಉಪಾಧ್ಯಕ್ಷ ಒಂಟಿಗೋಡಿ ಕಲ್ಲೇಶ್, ಖಜಾಂಚಿ ಚಿಂತರಪಳ್ಳಿ ಪ್ರಕಾಶ್, ಬಂಡಿಹಳ್ಳಿ ರಾಮಣ್ಣ, ಗಂಗಾವತಿ ಸುದರ್ಶನ್, ಎಪಿಎಂಸಿ ಕಾರ್ಯದರ್ಶಿ ಎನ್. ಶೈಲಜಾ, ಬಾದಾಮಿ ರಾಜಣ್ಣ, ಬಾದಾಮಿ ಪ್ರಭು, ಉಲವತ್ತಿ ಬಸಣ್ಣ, ಪೋತಗುಳಿ ನಾಗರಾಜ, ಕೆ. ದೇವೇಂದ್ರ ಸೇರಿದಂತೆ ಅನೇಕ ವರ್ತಕರು ಹಾಗೂ ರೈತರು ಭಾಗವಹಿಸಿದ್ದರು.

ಶಾರದಾ ಮಂಜುನಾಥ್ ಪ್ರಾರ್ಥಿಸಿದರು. ದೇವರೆಡ್ಡಿ ಸ್ವಾಗತ ಹಾಗೂ ನಿರೂಪಣೆ ನೆರವೇರಿಸಿದರು.

### ಯಶವಂತಪುರ–ವಿಜಯಪುರ ರೈಲು ಗದಗ ಮೇನ್ ಜಂಕ್ಷನ್‌ನಲ್ಲಿ ನಿಲ್ಲಿಸಲು ಒತ್ತಾಯ

# ಗದಗ ಜಂಕ್ಷನ್‌ಗೆ ಯಶವಂತಪುರ ರೈಲು ನಿಲುಗಡೆಗೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಯಶವಂತಪುರ – ವಿಜಯಪುರ ನಡುವೆ ಸಂಚರಿಸುವ ರೈಲಿಗೆ ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ಕಲ್ಪಿಸಬೇಕು ಹಾಗೂ ಗದಗ–ಹರಪನಹಳ್ಳಿ ನೂತನ ರೈಲು ಮಾರ್ಗ ಕಾಮಗಾರಿಯನ್ನು ಶೀಘ್ರ ಆರಂಭಿಸಬೇಕು ಎಂದು ಗದಗ ಜಿಲ್ಲಾ ವಿಕಾಸ ವೇದಿಕೆ ವತಿಯಿಂದ ಮಾಜಿ ಮುಖ್ಯಮಂತ್ರಿ ಹಾಗೂ ಗದಗ–ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಅವರಿಗೆ ಮನವಿ ಸಲ್ಲಿಸಲಾಯಿತು.

ಟ್ರೇನ್ ಸಂಖ್ಯೆ 06577/06578 ಯಶವಂತಪುರ–ವಿಜಯಪುರ ರೈಲು ವಾರಕ್ಕೆ ಎರಡು ಬಾರಿ ಸಂಚರಿಸುವಂತೆ ವಿಸ್ತರಿಸಲಾಗಿದ್ದರೂ, ಗದಗ ಬೈಪಾಸ್‌ನಲ್ಲಿ ನೀಡಲಾಗಿದ್ದ ಎರಡು ನಿಮಿಷಗಳ ತಾತ್ಕಾಲಿಕ ನಿಲುಗಡೆಯನ್ನೂ ರದ್ದುಪಡಿಸಿರುವುದು ಜಿಲ್ಲೆಯ ಪ್ರಯಾಣಿಕರಿಗೆ ಅನ್ಯಾಯವಾಗಿದೆ ಎಂದು ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ



ವಿಶ್ವನಾಥ ಖಾನಾಪೂರ ಆಕ್ರೋಶ ವ್ಯಕ್ತಪಡಿಸಿದರು.

ಬೆಂಗಳೂರು ಹಾಗೂ ವಿಜಯಪುರ ನಗರಗಳಿಗೆ ಪ್ರತಿನಿತ್ಯ ಪ್ರಯಾಣಿಸುವ ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಈ ರೈಲು ಅತ್ಯಂತ ಅನುಕೂಲಕರವಾಗಿದೆ. ಗದಗವು ಐತಿಹಾಸಿಕ ರೈಲ್ವೆ ಜಂಕ್ಷನ್ ಆಗಿದ್ದು, ಗದಗ–ಕುಷ್ಟಗಿ, ಗದಗ–ಗಂಗಾವತಿ, ಸಿಂಧನೂರು ಭಾಗಗಳ ಸಂಪರ್ಕಕ್ಕೂ ಪ್ರಮುಖ ಕೇಂದ್ರವಾಗಿದೆ. ಕೇವಲ ಇಂಜಿನ್ ಬದಲಾವಣೆಗೆ 15 ನಿಮಿಷಗಳ ಕಾಲಾವಕಾಶ ಬೇಕಿರುವ ಕಾರಣ ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ನೀಡಲು ಯಾವುದೇ ತೊಂದರೆ ಇರುವುದಿಲ್ಲ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಮನವಿಗೆ ಸ್ಪಂದಿಸಿದ ಬಸವರಾಜ ಬೊಮ್ಮಾಯಿ ರೈಲ್ವೆ ಇಲಾಖೆಯ ಗಮನಕ್ಕೆ

> “ಗದಗ ಐತಿಹಾಸಿಕ ರೈಲ್ವೆ ಜಂಕ್ಷನ್. ಜಿಲ್ಲೆಯ ಸಾವಿರಾರು ಪ್ರಯಾಣಿಕರ ಹಿತದೃಷ್ಟಿಯಿಂದ ಯಶವಂತಪುರ–ವಿಜಯಪುರ ರೈಲು ಗದಗ ಮೇನ್ ಜಂಕ್ಷನ್‌ನಲ್ಲಿ ನಿಲ್ಲಿಸುವುದು ಅತ್ಯಗತ್ಯ.”
> – ವಿಶ್ವನಾಥ ಖಾನಾಪೂರ, ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

ವಿಷಯವನ್ನು ಮತ್ತೊಮ್ಮೆ ತಂದು ಗದಗ ಜಂಕ್ಷನ್‌ನಲ್ಲಿ ನಿಲುಗಡೆ ಸೌಲಭ್ಯ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಇದೇ ವೇಳೆ ಗದಗ–ಹರಪನಹಳ್ಳಿ ನೂತನ ರೈಲು ಮಾರ್ಗದ ಸರ್ವೇ ಹಾಗೂ ಕಾಮಗಾರಿಯನ್ನು ಶೀಘ್ರ ಆರಂಭಿಸಲು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಹಾಗೂ ರಾಜ್ಯ ಸಚಿವ ವಿ. ಸೋಮಣ್ಣ ಅವರ ಗಮನಕ್ಕೆ ತರುವುದಾಗಿ ಹೇಳಿದರು.

ಈ ಯೋಜನೆಗೆ ವೇಗ ನೀಡುವಂತೆ ಗದಗ ಮತ್ತು ವಿಜಯನಗರ ಜಿಲ್ಲಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವರು, ವಿಜಯನಗರ ಲೋಕಸಭಾ ಸದಸ್ಯ ಖಣಇಚಿಡಿಚಿಟ ಹಾಗೂ ಹರಪನಹಳ್ಳಿ ಶಾಸಕಿಯಾದ Latha Mallikarjun ಅವರಿಗೂ ಈಗಾಗಲೇ ಮನವಿ ಸಲ್ಲಿಸಲಾಗಿದೆ ಎಂದು ವಿಶ್ವನಾಥ ಖಾನಾಪೂರ ತಿಳಿಸಿದರು.

ಈ ಸಂದರ್ಭದಲ್ಲಿ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನರಗುಂದ ಶಾಸಕ ಹಾಗೂ ಮಾಜಿ ಸಚಿವ ಸಿ.ಸಿ. ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಸತೀಶ ಪರ್ವತಗೌಡರ, ಜಗದೀಶ ಕಂಗೂರಿ, ವೆಂಕಟೇಶ ಕಬಾಡಿ, ಬಸವರಾಜ ತಳವಾರ, ಸಿದ್ದಪ್ಪ ಜರತಕನ್ನಿ, ರಜಾಕ್ ನೂರಭಾಷಾ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಪರಿಸರದ ಮೇಲಿನ ಅತಿಕ್ರಮಣ ನಿಲ್ಲಲಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪರಿಸರದ ಮೇಲೆ ಮಾನವನು ಮಾಡುತ್ತಿರುವ ಅತಿಕ್ರಮಣದಿಂದ ಪ್ರಕೃತಿ ಹಾನಿಗೊಳಗಾಗಿ ಮಾನವ ಬದುಕಿನ ಮೇಲೆಯೇ ದುಷ್ಪರಿಣಾಮ ಉಂಟಾಗುತ್ತಿದೆ ಎಂದು ಡಾ. ಎಸ್.ಸಿ. ಚವಡಿ ಹೇಳಿದರು.

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿ ನೆಟ್ಟು ಅವರು ಮಾತನಾಡಿದರು. ಕೈಗಾರಿಕರಣ, ಯಾಂತ್ರೀಕರಣ, ಪ್ಲಾಸ್ಟಿಕ್ ಬಳಕೆ ಹಾಗೂ ಪರಿಸರ ಮಾಲಿನ್ಯದಿಂದ ಪ್ರಕೃತಿಗೆ ಹಾನಿಯಾಗುತ್ತಿದ್ದು, ವಿದ್ಯಾರ್ಥಿಗಳು ಈಗಿನಿಂದಲೇ ಪರಿಸರ ಕಾಳಜಿ ಬೆಳೆಸಿಕೊಳ್ಳುವುದು ಅಗತ್ಯವಾಗಿದೆ ಎಂದು ಹೇಳಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಪುನಿತ ಓಲೇಕಾರ ಮಾತನಾಡಿ, ಪರಿಸರ ಸಂರಕ್ಷಣೆ ಸಂಸ್ಥೆಯ ಪ್ರಮುಖ ಉದ್ದೇಶವಾಗಿದ್ದು, ಪರಿಸರ ಉಳಿವಿಗೆ ಅಗತ್ಯ ಸಹಕಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಂತಾ ಬೆನಕನಹಳ್ಳಿ, ಪ್ರಕಾಶ ಮದ್ದಿನ, ಎ.ಎಂ. ಅಂಗಡಿ, ಇ.ಎಂ. ಗುಳೆದಗುಡ್ಡ, ವೀರುಪಾಕ್ಷಪ್ಪ ಕಣವಿ, ಶೈಲಾ ಬಳ್ಳಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದೃಶ್ಯಕಲಾ ಪದವಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜು (ಕಾವಾ) ವತಿಯಿಂದ 2026–27ನೇ ಶೈಕ್ಷಣಿಕ ಸಾಲಿನ ಬ್ಯಾಚುಲರ್ ಆಫ್ ವಿಜ್ಯುವಲ್ ಆರ್ಟ್ಸ್ (ಃಗಿಂ) ಪದವಿ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಮೈಸೂರು ವಿಶ್ವವಿದ್ಯಾಲಯದ ಅಧಿಸೂಚನೆಯಂತೆ ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ಬಿ.ವಿ.ಎ ಪದವಿಗೆ ದ್ವಿತೀಯ ಪಿಯುಸಿ ಅಥವಾ ಸಮಾನಾಂತರ ಕೋರ್ಸ್‌ನಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್, ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನಕ್ಕೆ ಅವಕಾಶ ಕಲ್ಪಿಸಲಾಗಿದೆ.

ಅಭ್ಯರ್ಥಿಗಳು [UUCMS ¥ÉÇÃlð¯ï](https://uucms.karnataka.gov.in) ಮೂಲಕ ಜೂನ್ 12ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಜೂನ್ 15ರಂದು ಅರ್ಹತಾ ಪರೀಕ್ಷೆ ಹಾಗೂ ವೈಯಕ್ತಿಕ ಸಂದರ್ಶನ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು, ಸಿದ್ಧಾರ್ಥನಗರ, ಮೈಸೂರು ಕಚೇರಿ ಅಥವಾ ದೂರವಾಣಿ ಸಂಖ್ಯೆ 0821–2438931 ಅನ್ನು ಸಂಪರ್ಕಿಸಬಹುದು.

### ನೀರು, ಬೀಜ–ಗೊಬ್ಬರ ಪೂರೈಕೆಯಲ್ಲಿ ನಿರ್ಲಕ್ಷ್ಯ ಸಹಿಸುವುದಿಲ್ಲ ಎಂದ ಮಾಜಿ ಸಿಎಂ ಬೊಮ್ಮಾಯಿ

# ಜನರ ಸಮಸ್ಯೆಗಳಿಗೆ ಮಾನವೀಯ ಸ್ಪಂದನೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ




ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಯೋಜನೆಗಳನ್ನು ಜನಸಾಮಾನ್ಯರಿಗೆ ಸಮರ್ಪಕವಾಗಿ ತಲುಪಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ಅಧಿಕಾರಿಗಳು ಬದ್ಧತೆ ಹಾಗೂ ಮಾನವೀಯ ದೃಷ್ಟಿಕೋನದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗದಗ–ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಅಕ್ರಮ ನೀರಿನ ಸಂಪರ್ಕ ತೆರವುಗೊಳಿಸಲು ಹಿಂದಿನ ಸಭೆಯಲ್ಲೇ ಸೂಚಿಸಿದ್ದರೂ ಕ್ರಮ ಕೈಗೊಳ್ಳದಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಹೇಳಿದರು.

"ನಮ್ಮ ಸಹನೆಯನ್ನು ಪರೀಕ್ಷಿಸಬೇಡಿ" ಎಂದು ಎಚ್ಚರಿಕೆ ನೀಡಿದ ಬೊಮ್ಮಾಯಿ, ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಮರ್ಪಕ ನೀರು ಪೂರೈಕೆ ಖಚಿತಪಡಿಸಬೇಕು ಎಂದು ಸೂಚಿಸಿದರು.

ಮುಂಗಾರು ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಬೀಜ ಹಾಗೂ ರಸಗೊಬ್ಬರ ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಡಿಎಪಿ ಹಾಗೂ ಯೂರಿಯಾ ಗೊಬ್ಬರಗಳ ಕಾಳಸಂತೆ ತಡೆಯಲು ಕಟ್ಟುನಿಟ್ಟಿನ ನಿಗಾ ಅಗತ್ಯ ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಅಧಿಕಾರಿಗಳು ಸಭೆಗಳಿಗೆ ಸಂಪೂರ್ಣ ಮಾಹಿತಿಯೊಂದಿಗೆ ಹಾಜರಾಗಬೇಕು. ಯೋಜನೆಗಳ ಅನುಷ್ಠಾನದಲ್ಲಿ ಕಾರ್ಯಕ್ಷಮತೆ ಮತ್ತು ಉತ್ತರದಾಯಿತ್ವ ಹೆಚ್ಚಬೇಕು ಎಂದು ಹೇಳಿದರು.

ಸಭೆಯಲ್ಲಿ ಶಾಸಕರಾದ ಸಿ.ಸಿ. ಪಾಟೀಲ, ಎಸ್.ವಿ. ಸಂಕನೂರ ಹಾಗೂ ಡಾ. ಚಂದ್ರು ಲಮಾಣಿ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಚರ್ಚಿಸಿ ಶಾಶ್ವತ ಪರಿಹಾರಕ್ಕೆ ಒತ್ತಾಯಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಎಸ್ಪಿ ರೋಹನ್ ಜಗದೀಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೇತುವೆ ಕಾಮಗಾರಿ ತ್ವರಿತಗೊಳಿಸಲು ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಗೊಜನೂರ ಗ್ರಾಮದ ಸಮೀಪ ಗದಗ–ಲಕ್ಷ್ಮೇಶ್ವರ ಸಂಪರ್ಕ ಕಲ್ಪಿಸುವ ಕಾರವಾರ–ಇಳಕಲ್ ರಾಜ್ಯ ಹೆದ್ದಾರಿಯಲ್ಲಿ 41 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಸೇತುವೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಗ್ರಾಪಂ ಮಾಜಿ ಸದಸ್ಯ ಶಿವರಾಜಗೌಡ ಪಾಟೀಲ ಆಗ್ರಹಿಸಿದ್ದಾರೆ.

ಮಳೆಗಾಲದಲ್ಲಿ ಹಳ್ಳದ ನೀರು ಸೇತುವೆ ಮೇಲೆ ಹರಿದು ವಾಹನ ಸವಾರರಿಗೆ ಸಾಕಷ್ಟು ತೊಂದರೆ ಉಂಟಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಕಿರು ಸೇತುವೆ ನಿರ್ಮಾಣ ಕಾರ್ಯ ಆರಂಭಿಸಿರುವುದು ಸಂತಸದ ಸಂಗತಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

ಆದರೆ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿದ್ದು, ಸೇತುವೆ ಪಕ್ಕದ ಕಚ್ಚಾ ರಸ್ತೆಯಲ್ಲಿ ವಾಹನ ಸಂಚಾರ ಕಷ್ಟಕರವಾಗಿದೆ. ಮಳೆ ಬಂದರೆ ಸಂಚಾರ ಸಂಪೂರ್ಣ ಸ್ಥಗಿತಗೊಳ್ಳುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ದೂರಿದ್ದಾರೆ.

ರಾಜ್ಯ ಹೆದ್ದಾರಿಯಲ್ಲಿ ನಿತ್ಯ ಸಾವಿರಾರು ವಾಹನಗಳು ಸಂಚರಿಸುತ್ತಿರುವುದರಿಂದ ಗುತ್ತಿಗೆದಾರರು ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು. ಈ ಬಗ್ಗೆ ಶಾಸಕರು ಹಾಗೂ ಅಧಿಕಾರಿಗಳು ಗಮನ ಹರಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

# ಚರಂಡಿ ನೀರಿಗೆ ಜಮೀನು ಜಲಾವೃತ: ರೈತರ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ



ಗ್ರಾಮದ ಚರಂಡಿ ನೀರು ಹಾಗೂ ಮಳೆ ನೀರು ರೈತರ ಜಮೀನುಗಳಿಗೆ ನುಗ್ಗಿ ಬೆಳೆ ಹಾನಿ ಉಂಟುಮಾಡುತ್ತಿರುವುದನ್ನು ಖಂಡಿಸಿ ರೈತರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಆಕ್ರೋಶ ವ್ಯಕ್ತಪಡಿಸಿದರು.

ಜಂತ್ಲಿ–ಶಿರೂರ ರಸ್ತೆಯಿಂದ ಕಟ್ಟಿಣ ಹಳ್ಳದವರೆಗಿನ ಸುಮಾರು 50 ಎಕರೆ ಕೃಷಿ ಭೂಮಿಗೆ ಗ್ರಾಮದಲ್ಲಿನ ಕೊಳಚೆ ನೀರು ಹರಿದು ಬರುತ್ತಿದ್ದು, 25ಕ್ಕೂ ಹೆಚ್ಚು ರೈತರ ಜಮೀನುಗಳು ಜಲಾವೃತಗೊಂಡು ಬೆಳೆಗಳು ಕೊಳೆಯುತ್ತಿವೆ ಎಂದು ದೂರಿದರು.

ಗ್ರಾಮ ಪಂಚಾಯಿತಿ ಸಮರ್ಪಕ ಚರಂಡಿ ಹಾಗೂ ತ್ಯಾಜ್ಯ ವಿಲೇವಾರಿ ವ್ಯವಸ್ಥೆ ಮಾಡದ ಕಾರಣ ಮಲಿನ ನೀರು, ಸಾಬೂನು ನೀರು ಹಾಗೂ ಕಸ ನೇರವಾಗಿ ಜಮೀನುಗಳಿಗೆ ಹರಿದು ಮಣ್ಣಿನ ಫಲವತ್ತತೆ ಹಾಳಾಗುತ್ತಿದೆ ಎಂದು ರೈತರು ಅಳಲು ತೋಡಿಕೊಂಡರು.

ಕಲುಷಿತ ನೀರು ನಿಂತು ದುರ್ವಾಸನೆ ಉಂಟಾಗಿದ್ದು, ಸೊಳ್ಳೆ ಹಾಗೂ ಕೀಟಗಳ ಕಾಟ ಹೆಚ್ಚಾಗಿ ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದೆ. ಹಲವರು ಕೃಷಿಯನ್ನೇ ನಿಲ್ಲಿಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದರು.

ತಕ್ಷಣ ಸಿ.ಸಿ. ಕಾಲುವೆ ನಿರ್ಮಿಸಿ ಚರಂಡಿ ನೀರನ್ನು ಹಳ್ಳಕ್ಕೆ ಹರಿಸುವ ವ್ಯವಸ್ಥೆ ಮಾಡಬೇಕು. ರೈತರಿಗೆ ಆಗಿರುವ ನಷ್ಟಕ್ಕೆ ಪರಿಹಾರ ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಡಾ. ಎಸ್.ಕೆ. ಮ್ಯಾಗೇರಿ, ಬಿ.ಬಿ. ಮಾಡಲಗೇರಿ, ಬಸವರಾಜ ಮುಳ್ಳಾಳ, ರಾಮಣ್ಣ ಕೊಪ್ಪದ, ಈಶಪ್ಪ ಕುಂಬಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# "ಖೇತ ಬಚಾವೊ" ಅಭಿಯಾನಕ್ಕೆ ರೈತರ ಸ್ಪಂದನೆ

■ ವಿಜಯಸಾಕ್ಷಿ ಸುದ್ದಿ, ಗದಗ




2026–27ನೇ ಸಾಲಿನ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳ ಪೂರ್ವಸಿದ್ಧತೆ ಅಂಗವಾಗಿ "ಕೃಷಿ ಭೂಮಿ ಉಳಿಸಿ ಮತ್ತು ಜಮೀನು ಸಂರಕ್ಷಿಸಿ" (ಖೇತ ಬಚಾವೊ) ಅಭಿಯಾನವನ್ನು ಐ.ಸಿ.ಎ.ಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಕರ್ನಾಟಕ ರಾಜ್ಯ ಕೃಷಿ ಇಲಾಖೆ, ಆತ್ಮ ಯೋಜನೆ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆಯ ಸಹಯೋಗದಲ್ಲಿ ಜೂನ್ 1ರಿಂದ 30ರವರೆಗೆ ಜಿಲ್ಲೆಯ ವಿವಿಧ ತಾಲೂಕುಗಳ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದೆ.

ಅಭಿಯಾನದ ಅಂಗವಾಗಿ ಜೂನ್ 8ರಂದು ಮುಂಡರಗಿ ತಾಲೂಕಿನ ಕದಾಂಪೂರ ಹಾಗೂ ಚುರ್ಚಿಹಾಳ, ಗದಗ ತಾಲೂಕಿನ ಹೊಸಳ್ಳಿ ಮತ್ತು ಬೆಳದಡಿ ಗ್ರಾಮಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನಿಗಳು, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು, ಕೃಷಿ ಅಧಿಕಾರಿಗಳು, ಆತ್ಮ ಸಿಬ್ಬಂದಿ, ಕೃಷಿ ಸಖಿಯರು, ಪಶು ಸಖಿಯರು, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಪ್ರಗತಿಪರ ರೈತರು ಭಾಗವಹಿಸಿದ್ದರು.

ರೈತರಿಗೆ ಬೀಜೋಪಚಾರ, ಮಣ್ಣಿನ ಸಂರಕ್ಷಣೆ, ನೈಸರ್ಗಿಕ ಕೃಷಿ, ಪರ್ಯಾಯ ಬೆಳೆ ಪದ್ಧತಿ, ಜೈವಿಕ ಗೊಬ್ಬರ ಬಳಕೆ, ಕೊಟ್ಟಿಗೆ ಗೊಬ್ಬರ, ಸಾವಯವ ಗೊಬ್ಬರ ಹಾಗೂ ಎರೆಹುಳು ಗೊಬ್ಬರ ಬಳಕೆಯ ಮಹತ್ವದ ಕುರಿತು ಮಾಹಿತಿ ನೀಡಲಾಯಿತು. ಜೊತೆಗೆ ಕಡಿಮೆ ಅಡುಗೆ ಎಣ್ಣೆ ಬಳಕೆಯಿಂದ ಆರೋಗ್ಯದ ಮೇಲೆ ಆಗುವ ಲಾಭಗಳ ಬಗ್ಗೆಯೂ ಜಾಗೃತಿ ಮೂಡಿಸಲಾಯಿತು.

ರಸಗೊಬ್ಬರಗಳನ್ನು ಸಮತೋಲಿತವಾಗಿ ಬಳಸುವ ಮೂಲಕ ಜಮೀನು ಮತ್ತು ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬೇಕು ಎಂದು ವಿಜ್ಞಾನಿಗಳು ಸಲಹೆ ನೀಡಿದರು. ಇದೇ ವೇಳೆ ಬೀಜೋಪಚಾರದ ಪ್ರಾತ್ಯಕ್ಷಿಕೆ ನಡೆಸಿ ರೈತರಿಗೆ ಮಾಹಿತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯಿಂದ ಉದ್ದಿನ ಕಾಳಿನ ಮಿನಿ ಕಿಟ್‌ಗಳನ್ನು ವಿತರಿಸಲಾಗಿದ್ದು, ಬಿತ್ತನೆ ಕುರಿತ ಮಾರ್ಗದರ್ಶನ ನೀಡಲಾಯಿತು. ಜಿಲ್ಲೆಯ ವಿವಿಧ ಗ್ರಾಮಗಳ 300ಕ್ಕೂ ಹೆಚ್ಚು ರೈತರು ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡರು.

# ಶಿಗ್ಲಿಯಲ್ಲಿ ಸ್ವಚ್ಛತಾ ಅಭಿಯಾನ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತದ 12 ವರ್ಷಗಳ ಸಾಧನೆ ಹಾಗೂ ದೇಶದ ಅಭಿವೃದ್ಧಿಯ ಸಂಕಲ್ಪದ ಅಂಗವಾಗಿ ಬಿಜೆಪಿ ಕಾರ್ಯಕರ್ತರು ಶಿಗ್ಲಿಯ ಶ್ರೀ ಪರ್ವತ ಮಲ್ಲೇಶ್ವರ ದೇವಸ್ಥಾನದ ಸುತ್ತಮುತ್ತ ಸ್ವಚ್ಛತಾ ಕಾರ್ಯ ನಡೆಸಿದರು.

ತ್ಯಾಜ್ಯ ಮತ್ತು ಕಸದಿಂದ ತುಂಬಿದ್ದ ದೇವಸ್ಥಾನದ ಪರಿಸರವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆಯ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ಗ್ರಾಪಂ ಮಾಜಿ ಅಧ್ಯಕ್ಷ ಡಿ.ವೈ. ಹುನಗುಂದ ಹಾಗೂ ಮಹಾಶಕ್ತಿ ಕೇಂದ್ರದ ಪ್ರಮುಖ ಅಶೋಕ ಶಿರಹಟ್ಟಿ ಮಾತನಾಡಿ, ಸ್ವಚ್ಛ ಭಾರತ ಅಭಿಯಾನದ ಮೂಲಕ ಪ್ರಧಾನಿ ನರೇಂದ್ರ ಮೋದಿ ಸ್ವತಃ ಸ್ವಚ್ಛತಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಜನರಿಗೆ ಪ್ರೇರಣೆಯಾಗಿದ್ದಾರೆ. ಸ್ವಚ್ಛತೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಈ ವೇಳೆ ಸಂಜು ದೇಸಾಯಿ, ಹುಚ್ಚಪ್ಪ ಹೂಗಾರ, ಈರಣ್ಣ ಅಕ್ಕೂರ, ನಟರಾಜ ಪವಾಡದ, ಮುತ್ತಣ್ಣ ಕೆಸರಳ್ಳಿ, ಮುನ್ನಾ ನದಾಫ್, ಕೃಷ್ಣಾ ಬೀದರಳ್ಳಿ, ಬಾಪೂಜಿ ಹರ್ತಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಗಿಡಮರಗಳೇ ಜೀವ ಸಂಕುಲದ ಉಸಿರು

■ ವಿಜಯಸಾಕ್ಷಿ ಸುದ್ದಿ, ಗದಗ



"ಗಿಡಮರಗಳು ವಿಶ್ವದ ಸಕಲ ಜೀವರಾಶಿಗಳ ಜೀವಾಳವಾಗಿದ್ದು, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ" ಎಂದು ನಿವೃತ್ತ ಪ್ರಾಧ್ಯಾಪಕ ಶಿವನಗೌಡ ಗೌಡರ ಹೇಳಿದರು.

ನಗರದ ಬಸವ ಯೋಗ ಮಹಾವಿದ್ಯಾಲಯ ವತಿಯಿಂದ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಲಿಂಬೆ ಸಸಿ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ನಾಶದಿಂದ ಭವಿಷ್ಯದಲ್ಲಿ ಮಾನವ ಸಂಕುಲ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದ್ದು, "ಹಸಿರೇ ಉಸಿರು" ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ವಿದ್ಯಾ ಬಿ. ಸ್ವಾಮಿ ಪರಿಸರ ಸಂರಕ್ಷಣೆಯಲ್ಲಿ ರೈತರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಎಂ. ವ್ಹಿ. ಐಹೊಳ್ಳಿ, ಸಸಿ ನೆಡುವುದರ ಜೊತೆಗೆ ಅವುಗಳನ್ನು ಪೋಷಿಸಿ ಬೆಳೆಸುವ ಕಾರ್ಯವೂ ಅಗತ್ಯ ಎಂದು ಹೇಳಿದರು.

ವೇದಿಕೆಯಲ್ಲಿ ಕೆ.ಎಸ್. ಪಲ್ಲೇದ, ಬಿ.ಬಿ. ಇಬ್ರಾಹಿಂಪೂರ, ವಿಜಯಲಕ್ಷ್ಮೀ ಆನೆಹೊಸೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಹಳ್ಳಿಯ ಸರ್ಕಾರಿ ಶಾಲೆಗಳ ಕತ್ತುಹಿಸುಕುವ ನೀತಿ ನಿಲ್ಲಲಿ–ಎಐಡಿಎಸ್‌ಓ

# ಕೆಪಿಎಸ್‌ಗೆ ಮಾತ್ರ ಶಿಕ್ಷಕರ ನೇಮಕಕ್ಕೆ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಗದಗ




> "ನೇರವಾಗಿ ಶಾಲೆ ಮುಚ್ಚದೇ, ಶಿಕ್ಷಕರನ್ನೂ ಸೌಲಭ್ಯವನ್ನೂ ನಿರಾಕರಿಸಿ ಹಳ್ಳಿಯ ಶಾಲೆಗಳನ್ನು ಸಾಯಿಸುವ ಕೆಲಸ ಸರ್ಕಾರ ಮಾಡುತ್ತಿದೆ"
> – ಎಂ. ಶಾಂತಿ

ಸರ್ಕಾರಿ ಶಾಲೆಗಳಲ್ಲಿ ಒಂದನೇ ತರಗತಿಯಿಂದಲೇ ಕಂಪ್ಯೂಟರ್ ಶಿಕ್ಷಣ ನೀಡಲು 2,500 ಐಟಿ ಶಿಕ್ಷಕರ ನೇಮಕಾತಿ ಘೋಷಿಸಿರುವ ರಾಜ್ಯ ಸರ್ಕಾರ, ಎಲ್ಲ ಹುದ್ದೆಗಳನ್ನೂ ಕೇವಲ ಕೆಪಿಎಸ್ ಶಾಲೆಗಳಿಗೆ ಮೀಸಲಿಟ್ಟಿರುವುದನ್ನು ಎಐಡಿಎಸ್‌ಓ ತೀವ್ರವಾಗಿ ಖಂಡಿಸಿದೆ.

ಈ ಕುರಿತು ಪ್ರಕಟಣೆ ನೀಡಿರುವ ಎಐಡಿಎಸ್‌ಓ ಗದಗ ಜಿಲ್ಲಾ ಸಂಚಾಲಕಿ ಎಂ. ಶಾಂತಿ, ಇತ್ತೀಚೆಗೆ ನೇಮಕಗೊಂಡ 11 ಸಾವಿರ ಅತಿಥಿ ಶಿಕ್ಷಕರ ಹುದ್ದೆಗಳಲ್ಲೂ ಕೆಪಿಎಸ್ ಶಾಲೆಗಳಿಗೆ ಪ್ರಧಾನ ಆದ್ಯತೆ ನೀಡಲಾಗಿದೆ. ವರ್ಗಾವಣೆ ಪ್ರಕ್ರಿಯೆಯಲ್ಲೂ ಇದೇ ಧೋರಣೆ ಮುಂದುವರಿದಿದೆ ಎಂದು ಆರೋಪಿಸಿದ್ದಾರೆ.

ದಶಕಗಳಿಂದ ಗ್ರಾಮೀಣ ಭಾಗದ ಬಡ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವ ಸರ್ಕಾರಿ ಶಾಲೆಗಳನ್ನು ಕಡೆಗಣಿಸಿ, ಇತ್ತೀಚೆಗೆ ಆರಂಭವಾದ ಕೆಪಿಎಸ್ ಶಾಲೆಗಳನ್ನು ಮಾತ್ರ ಸರ್ಕಾರ ಪ್ರೋತ್ಸಾಹಿಸುತ್ತಿದೆ. ಹಳ್ಳಿಯ ಶಾಲೆಗಳ ವಿಲೀನಕ್ಕೆ ರಾಜ್ಯದಾದ್ಯಂತ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ನಡುವೆಯೂ, ಈಗ ಸೌಲಭ್ಯ ಹಾಗೂ ನೇಮಕಾತಿಗಳ ಮೂಲಕ ಗ್ರಾಮೀಣ ಶಾಲೆಗಳನ್ನು ದುರ್ಬಲಗೊಳಿಸುವ ಕೆಲಸ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಸುಮಾರು 7 ಸಾವಿರ ಏಕೋಪಾಧ್ಯಾಯ ಶಾಲೆಗಳಿದ್ದು, ವಿಶೇಷವಾಗಿ ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಶಾಲೆಗಳು ಶಿಕ್ಷಕರ ತೀವ್ರ ಕೊರತೆಯನ್ನು ಎದುರಿಸುತ್ತಿವೆ. ಇಂತಹ ಶಾಲೆಗಳಿಗೆ ಸರ್ಕಾರ ತಕ್ಷಣ ಶಿಕ್ಷಕರನ್ನು ನಿಯೋಜಿಸಬೇಕು ಎಂದು ಎಐಡಿಎಸ್‌ಓ ಆಗ್ರಹಿಸಿದೆ.

"ನಮ್ಮೂರ ಶಾಲೆ ಉಳಿಸಿ" ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲು ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಣ ಪ್ರೇಮಿ ಜನತೆ ಮುಂದಾಗಬೇಕು ಎಂದು ಎಐಡಿಎಸ್‌ಓ ಕರೆ ನೀಡಿದೆ.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಎಸ್.ಎಸ್.ಕೆ. ತರುಣ ಸಂಘದ ವತಿಯಿಂದ ಜೂನ್ 14ರಂದು ಉಚಿತ ಪಠ್ಯಪುಸ್ತಕ ವಿತರಣೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೆಟಗೇರಿ ಭಾಗದ ಎಸ್.ಎಸ್.ಕೆ. ಸಮಾಜದ 1ರಿಂದ 10ನೇ ತರಗತಿ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಅರ್ಜಿ ನಮೂನೆ ಭರ್ತಿ ಮಾಡಿ ಜೂನ್ 11ರೊಳಗೆ ತರುಣ ಸಂಘದ ಕಾರ್ಯಾಲಯಕ್ಕೆ ಸಲ್ಲಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಇದೇ ವೇಳೆ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಆಸಕ್ತ ವಿದ್ಯಾರ್ಥಿಗಳು ಅಂಕಪಟ್ಟಿಯ ಝೆರಾಕ್ಸ್ ಪ್ರತಿಯೊಂದಿಗೆ ಅರ್ಜಿ ಸಲ್ಲಿಸಬೇಕು ಎಂದು ಸಂಘದ ಗೌರವ ಕಾರ್ಯದರ್ಶಿ ಸೋಮಶೇಖರ ಮೇರವಾಡೆ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2026ನೇ ಸಾಲಿನ ಸಮನ್ವಯ ಶಿಕ್ಷಣ ಮಧ್ಯವರ್ತನ ಚಟುವಟಿಕೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಪೂರ್ವ ಪ್ರಾಥಮಿಕದಿಂದ 12ನೇ ತರಗತಿ ವರೆಗೆ ವಿಶೇಷ ಶಿಕ್ಷಕರ ಸೇವೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪೂರ್ವ ಪ್ರಾಥಮಿಕ ಹಾಗೂ 1ರಿಂದ 5ನೇ ತರಗತಿ, 6ರಿಂದ 8ನೇ ತರಗತಿ ಮತ್ತು 9ರಿಂದ 12ನೇ ತರಗತಿಗಳಿಗಾಗಿ ತಾತ್ಕಾಲಿಕವಾಗಿ ನೇರ ಗುತ್ತಿಗೆ ಆಧಾರದಲ್ಲಿ ಬಿ.ಐ.ಇ.ಆರ್.ಟಿ ವಿಶೇಷ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.

ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನವಾಗಿದ್ದು, ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9448999340 ಅಥವಾ ಶಾಲಾ ಶಿಕ್ಷಣ ಇಲಾಖೆಯ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**4,399 ದಿನಗಳ ಸೇವೆಗೆ ಸಂಭ್ರಮಾಚರಣೆ; ದೇವಸ್ಥಾನಗಳಲ್ಲಿ ಪೂಜೆ, ಸಿಹಿ ವಿತರಣೆ**

# ಮೋದಿ ಆಡಳಿತಕ್ಕೆ ಐತಿಹಾಸಿಕ ಮೈಲುಗಲ್ಲು; ವಿಶೇಷ ಪೂಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಿ ನರೇಂದ್ರ ಮೋದಿ ಅವರು ಕೇಂದ್ರದಲ್ಲಿ ಸತತ 4,399 ದಿನಗಳ ಆಡಳಿತ ಪೂರ್ಣಗೊಳಿಸುವ ಮೂಲಕ ದೇಶದ ಅತ್ಯಧಿಕ ಅವಧಿ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಮಂತ್ರಿಯ ದಾಖಲೆಯನ್ನು ನಿರ್ಮಿಸಿದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಬಿಜೆಪಿ ವತಿಯಿಂದ ನಗರದ ವೀರ ನಾರಾಯಣ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಸಂಭ್ರಮಾಚರಣೆ ನಡೆಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, 1952ರ ಮೊದಲ ಸಾರ್ವತ್ರಿಕ ಚುನಾವಣೆಯ ನಂತರ ಜವಾಹರಲಾಲ್ ನೆಹರು 4,398 ದಿನಗಳ ಕಾಲ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸಿದ್ದು ಇದುವರೆಗಿನ ದಾಖಲೆಯಾಗಿತ್ತು. ಇದೀಗ ಪ್ರಧಾನಿ ನರೇಂದ್ರ ಮೋದಿ ಆ ದಾಖಲೆಯನ್ನು



ಹಿಂದಿಕ್ಕಿ ದೇಶದ ಇತಿಹಾಸದಲ್ಲಿ ಹೊಸ ಮೈಲಿಗಲ್ಲು ನಿರ್ಮಿಸಿದ್ದಾರೆ ಎಂದು ಹೇಳಿದರು.

ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಕಳೆದ 12 ವರ್ಷಗಳಲ್ಲಿ ಪ್ರಧಾನಿ ಮೋದಿ ಜಾರಿಗೆ ತಂದ ನೂರಾರು ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿವೆ. ಮಹಿಳೆಯರು, ರೈತರು, ಯುವಕರು ಹಾಗೂ ಕಾರ್ಮಿಕರ ಬದುಕಿನಲ್ಲಿ ಕೇಂದ್ರ ಸರ್ಕಾರದ ಯೋಜನೆಗಳು ಮಹತ್ವದ ಬದಲಾವಣೆ ತಂದಿವೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಸಂದರ್ಭೋಚಿತವಾಗಿ ಮಾತನಾಡಿದರು.

> "ಪ್ರತಿ ದಿನ 18 ಗಂಟೆಗಳ ಕಾಲ ದುಡಿದು ಭಾರತವನ್ನು ವಿಶ್ವದ ನಾಲ್ಕನೇ ಬಲಿಷ್ಠ ರಾಷ್ಟ್ರವನ್ನಾಗಿ ರೂಪಿಸಿದ ಕೀರ್ತಿ ಮೋದಿಯವರಿಗೆ ಸಲ್ಲುತ್ತದೆ"
> – ಬಸವರಾಜ ಬೊಮ್ಮಾಯಿ, ಸಂಸದ

ಇದಕ್ಕೂ ಮುನ್ನ ವೀರ ನಾರಾಯಣ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಬಳಿಕ ಭಕ್ತರಿಗೆ ಸಿಹಿ ವಿತರಿಸಲಾಯಿತು. ನಂತರ ಪೇಟೆ ವೀರಭದ್ರೇಶ್ವರ ದೇವಸ್ಥಾನದಲ್ಲಿಯೂ ವಿಶೇಷ ಪೂಜೆ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಎಂ.ಎಸ್. ಕರೀಗೌಡ್ರ, ಮೋಹನ ಮಾಳಶೆಟ್ಟಿ, ಎಂ.ಎಮ್. ಹಿರೇಮಠ, ಲಿಂಗರಾಜ ಪಾಟೀಲ, ಜಗನ್ನಾಥಸಾ ಭಾಂಡಗೆ, ವಿಜಯಕುಮಾರ ಗಡ್ಡಿ, ಭರತ್ ಬೊಮ್ಮಾಯಿ, ವಿನಾಯಕ ಮಾನ್ವಿ, ಅನಿಲ ಅಬ್ಬಿಗೇರಿ ಸೇರಿದಂತೆ ಹಲವಾರು ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

**ನವಲಗುಂದ ಪೊಲೀಸರ ಭರ್ಜರಿ ಕಾರ್ಯಾಚರಣೆ; ₹5.12 ಲಕ್ಷ ಮೌಲ್ಯದ ಚಿನ್ನಾಭರಣ ವಶ**

# ಸಿಸಿಟಿವಿ ಜಾಡು ಹಿಡಿದು ಅಂತರ ಜಿಲ್ಲಾ ಮನೆಕಳ್ಳರ ಬಂಧನ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯ ನವಲಗುಂದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮನೆ ಕಳ್ಳತನ ಪ್ರಕರಣವನ್ನು ಭೇದಿಸಿರುವ ಪೊಲೀಸರು ಅಂತರ ಜಿಲ್ಲಾ ಮನೆಕಳ್ಳರನ್ನು ಬಂಧಿಸಿ, ₹5.12 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ಕಳ್ಳತನಕ್ಕೆ ಬಳಸಿದ ಮೋಟಾರ್ ಸೈಕಲ್ ವಶಪಡಿಸಿಕೊಂಡಿದ್ದಾರೆ.

ನವಲಗುಂದ ಪೊಲೀಸ್ ಠಾಣೆಯ ಗುನ್ನಾ ನಂ. 86/2026 ಕಲಂ 331(1), 305 ಬಿಎನ್‌ಎಸ್ ಪ್ರಕರಣದಲ್ಲಿ ಮೇ 31ರಂದು ಪಿರ್ಯಾದಿದಾರ ಅಲ್ಲಾಗೌಡ ತಂದೆ ಹನಮಂತಗೌಡ ಬಾಲನಗೌಡ, ವಯಸ್ಸು 42 ವರ್ಷ, ಅಮರಗೋಳ ತಾ. ರೋಣ, ಹಾಲಿ ವಾಸ್ತಿ ನವಲಗುಂದ ಬಸ್ತಿ ಪ್ಲಾಟ್ ನಿವಾಸಿ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಾಗಿತ್ತು.



ಪ್ರಕರಣ ದಾಖಲಾದ ತಕ್ಷಣ ನವಲಗುಂದ ಸಿಪಿಐ ರವಿಕುಮಾರ ಕಪ್ಪತನವರ ನೇತೃತ್ವದಲ್ಲಿ ತನಿಖೆ ಆರಂಭಿಸಲಾಗಿತ್ತು. ತನಿಖಾ ತಂಡದಲ್ಲಿ ಜನಾರ್ಧನ ಬಿ., ಉಮಾದೇವಿ ಸೇರಿದಂತೆ ಸಿಬ್ಬಂದಿಯನ್ನು ಒಳಗೊಂಡ ಎರಡು ಪ್ರತ್ಯೇಕ ತಂಡಗಳನ್ನು ರಚಿಸಲಾಗಿತ್ತು.

ನವಲಗುಂದ ಪಟ್ಟಣ ಹಾಗೂ ಹೊರವಲಯದ ವಿವಿಧ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸಿ, ತಾಂತ್ರಿಕ ಮಾಹಿತಿಯ ಆಧಾರದ ಮೇಲೆ ಆರೋಪಿಗಳ ಜಾಡು ಪತ್ತೆ ಹಚ್ಚಲಾಯಿತು. ಬಳಿಕ ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಕಳ್ಳತನ ಮಾಡಿರುವುದಾಗಿ ಒಪ್ಪಿಕೊಂಡಿದ್ದಾರೆ. ಆರೋಪಿಗಳು ಬೆಳಗಾವಿ ಜಿಲ್ಲೆಯವರಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಆರೋಪಿತರಿಂದ 46 ಗ್ರಾಂ ಬಂಗಾರದ ಆಭರಣಗಳು, ಅಂದಾಜು ₹5,12,000 ಮೌಲ್ಯದ ಚಿನ್ನಾಭರಣ ಹಾಗೂ ಕೃತ್ಯಕ್ಕೆ ಬಳಸಿದ ಒಂದು ಮೋಟಾರ್ ಸೈಕಲ್ ವಶಪಡಿಸಿಕೊಳ್ಳಲಾಗಿದೆ.

ಈ ಕಾರ್ಯಾಚರಣೆ ಗುಂಜನ್ ಆರ್ಯ, ಶಿವಾನಂದ ಕಟಗಿ ಹಾಗೂ ವಿನೋದ ಮುಕ್ತೇದಾರ ಅವರ ಮಾರ್ಗದರ್ಶನದಲ್ಲಿ ನಡೆಯಿತು.

ತನಿಖಾ ತಂಡದಲ್ಲಿ ಎಸ್.ಡಿ. ಮಲ್ಲನಗೌಡ್ರ (ಎಎಸ್‌ಐ), ಸುರೇಶ ಹುರಳಿ, ಎಂ.ಎಚ್. ನಾಗಾವಿ, ಮುತ್ತು ಭಜಂತ್ರಿ, ಸದಾಶಿವ ಮಳ್ಳೂರ, ಸಂತೋಷ ಸಿಂಗಣ್ಣವರ, ಸಿ.ಎಸ್. ಮಠಪತಿ, ಗೂಳಪ್ಪ ಜಗಲಿ, ಧಾರವಾಡ ಜಿಲ್ಲಾ ತಾಂತ್ರಿಕ ಸಿಬ್ಬಂದಿಗಳಾದ ವಿಠ್ಠಲ ಡಂಗನ್ನವರ ಹಾಗೂ ರವಿ ಪಟ್ಟೇದ ಭಾಗವಹಿಸಿದ್ದರು.

ಪ್ರಕರಣವನ್ನು ಭೇದಿಸಿ ಕಳುವಾದ ಆಸ್ತಿಯನ್ನು ವಶಪಡಿಸಿಕೊಂಡ ನವಲಗುಂದ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವೈಖರಿಯನ್ನು ಹಿರಿಯ ಅಧಿಕಾರಿಗಳು ಪ್ರಶಂಸಿಸಿದ್ದಾರೆ.

## ಮುಧೋಳ ಇಂಡಸ್ಟ್ರೀಸ್ ಅಭಿವೃದ್ಧಿಗೆ ಡಿಸಿ ಸೂಚನೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆನಂದಾಶ್ರಮ ರಸ್ತೆಯ ಮುಧೋಳ ಇಂಡಸ್ಟ್ರೀಸ್ ಕೈಗಾರಿಕಾ ಪ್ರದೇಶ ಕಳೆದ ಸುಮಾರು 30 ವರ್ಷಗಳಿಂದ ಸಮರ್ಪಕ ಅಭಿವೃದ್ಧಿ ಕಾಣದೆ ಹಿಂದುಳಿದಿರುವ ಕುರಿತು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಗಮನಕ್ಕೆ ತರಲಾಗಿದ್ದು, ಸಮಸ್ಯೆ ಕುರಿತು ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಕೈಗಾರಿಕೆ ಜಂಟಿ ನಿರ್ದೇಶಕ ಪ್ರಶಾಂತ್ ಬಾರಿಗಿಡದ ಅವರಿಗೆ ಸೂಚನೆ ನೀಡಲಾಗಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಈ ವಿಷಯ ಚರ್ಚೆಗೆ ಬಂದಿತು. ಬಳಿಕ ಜೂನ್ 9ರಂದು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಕೈಗಾರಿಕಾ ಪ್ರದೇಶದ ಉದ್ಯಮಿಗಳನ್ನು ಒಗ್ಗೂಡಿಸಿ ಸಮಸ್ಯೆಗಳ ಕುರಿತು ಸುದೀರ್ಘ ಸಭೆ ನಡೆಸಲಾಯಿತು.

ಸಭೆಯಲ್ಲಿ ಜಿಲ್ಲಾ ಕೈಗಾರಿಕೆ ಕೇಂದ್ರದ ಕಿರಣ ರಾಜಣ್ಣವರ ಹಾಗೂ ವಿಶ್ವನಾಥ್ ಕಡಿಮನಿ ಅವರೊಂದಿಗೆ ಉದ್ಯಮಿಗಳು ಮೂಲಸೌಕರ್ಯ ಕೊರತೆ, ರಸ್ತೆ, ಚರಂಡಿ ಸೇರಿದಂತೆ ಹಲವು ಸಮಸ್ಯೆಗಳ ಕುರಿತು ಮಾಹಿತಿ ನೀಡಿದರು.

ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ, ಕೈಗಾರಿಕಾ ಪ್ರದೇಶದ ಸಮಗ್ರ ಅಭಿವೃದ್ಧಿಗೆ ಜಿಲ್ಲಾಡಳಿತ ವಿಶೇಷ ಗಮನ ಹರಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಪ್ರಕಾಶ್ ಉಗಲಾಟ್, ಶಿದ್ದರಾಮಪ್ಪ, ರಾಘವೇಂದ್ರ ಕಾರ್ವಾಡ್, ಅಶೋಕ ಸಂಕಣ್ಣವರ್, ಅರವಿಂದ್ ಕಾಮತ್, ಅರುಣ್ ಮಿಸ್ಕಿನ್, ಬಸವರಾಜ ಅಂಗಡಿ, ಸಿ.ಪಿ. ಹಿರೇಮಠ, ಸಂಜಯ್ ಮಿಸ್ಕಿನ್ ಸೇರಿದಂತೆ ಹಲವಾರು ಕೈಗಾರಿಕೋದ್ಯಮಿಗಳು ಪಾಲ್ಗೊಂಡಿದ್ದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪಿ. ಹುಣಿಸಿಕಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗನವಾಡಿಯಲ್ಲಿ ಎಲ್‌ಕೆಜಿ-ಯುಕೆಜಿ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಆಯ್ಕೆಗೊಂಡ ಸರ್ಕಾರಿ ಮಾಂಟೆಸ್ಸರಿ ಶಾಲೆಗಳ ಯೋಜನೆಯಡಿ ತಾಲೂಕಿನ ಕಪ್ಪಲಿ-66ನೇ ಅಂಗನವಾಡಿ ಕೇಂದ್ರದಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ಪ್ರಾರಂಭೋತ್ಸವ ಕಾರ್ಯಕ್ರಮ ನಡೆಯಿತು.

ಸರಸ್ವತಿ ಪೂಜೆ ನೆರವೇರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಾಲ ವಿಕಾಸ ಸಮಿತಿ ಅಧ್ಯಕ್ಷೆ ಸುಕನ್ಯ ದ್ಯಾವನಗೌಡ್ರ ಅಧ್ಯಕ್ಷತೆ ವಹಿಸಿದ್ದರು.



ಮಂಜುನಾಥ ಗುಗ್ಗರಿ ಮಾತನಾಡಿ, ಅಂಗನವಾಡಿಗಳಲ್ಲಿ ಎಲ್‌ಕೆಜಿ-ಯುಕೆಜಿ ಆರಂಭದಿಂದ ಮಕ್ಕಳಲ್ಲಿ ನವಚೈತನ್ಯ ಮೂಡಲಿದ್ದು, ಸಮವಸ್ತ್ರ, ಪುಸ್ತಕ, ಸ್ಕೂಲ್ ಬ್ಯಾಗ್, ವಾಟರ್ ಬಾಟಲ್ ಹಾಗೂ ಟಿ.ವಿ. ಮೂಲಕ ಶಿಕ್ಷಣ-ಮನರಂಜನೆ ನೀಡುವುದು ವಿಶೇಷವಾಗಿದೆ ಎಂದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೆಂಕಪ್ಪ ಗಿರಿತಿಮ್ಮನವರ ಮಾತನಾಡಿ, ಇಲಾಖೆಯ ವಿವಿಧ ಯೋಜನೆಗಳ ಜೊತೆಗೆ ಮಾಂಟೆಸ್ಸರಿ ಮಾದರಿಯ ಶಿಕ್ಷಣ ಮಕ್ಕಳಿಗೆ ಹೆಚ್ಚು ಪ್ರಯೋಜನಕಾರಿ ಆಗಲಿದೆ ಎಂದು ತಿಳಿಸಿದರು.

ಮಲ್ಲವ್ವ ಗಿರಿಯಪ್ಪಗೌಡ್ರ ಮಕ್ಕಳಿಗೆ ಸ್ಕೂಲ್ ಬ್ಯಾಗ್, ಸಮವಸ್ತ್ರ ಹಾಗೂ ನೀರಿನ ಬಾಟಲ್ ವಿತರಿಸಿದರು. ಗೊಡಚಪ್ಪ ಬಡಿಗೇರ, ವೀರಣ್ಣ ಚಿಂದಿ, ಸುಮಿತ್ರಾ ಸಿಸ್ಟರ್ ಹಾಗೂ ಶಾಂತಲಾ ಅಂಕ್ಲಿಮಠ ಪಠ್ಯೋಪಕರಣಗಳಿಗೆ ಧನಸಹಾಯ ನೀಡಿದರು.

ಕಾರ್ಯಕ್ರಮದಲ್ಲಿ ಗೊಡಚಪ್ಪ ಚಿಂದಿ, ಸಾವತ್ರೆವ್ವ ಕಲಾರಿ, ಸೀಮಾ ತೆಗ್ಗಿ, ಪರಿಮಳಾ ಹೂಗಾರ ಸೇರಿದಂತೆ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಾರ್ಯಕರ್ತೆಯರು, ತಾಯಂದಿರು ಹಾಗೂ ಮಕ್ಕಳು ಭಾಗವಹಿಸಿದ್ದರು.

## ರೌಡಿಶೀಟರ್‌ಗಳ ಮನೆಗಳ ಮೇಲೆ ಪೊಲೀಸ್ ದಾಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಬುಧವಾರ ಬೆಳಿಗ್ಗೆ ಪೊಲೀಸರು ರೌಡಿಶೀಟರ್‌ಗಳ ಮನೆಗಳ ಮೇಲೆ ಏಕಕಾಲಕ್ಕೆ ತಪಾಸಣೆ ನಡೆಸಿ, ಒಟ್ಟು 43 ರೌಡಿಶೀಟರ್‌ಗಳನ್ನು ಪರಿಶೀಲನೆಗೆ ಒಳಪಡಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ನಿರ್ದೇಶನದಂತೆ ನಡೆದ ವಿಶೇಷ ಕಾರ್ಯಾಚರಣೆಯಲ್ಲಿ ಬೆಟಗೇರಿ ಬಡಾವಣೆ, ಗದಗ ಶಹರ ಹಾಗೂ ಗ್ರಾಮೀಣ ಪೊಲೀಸ್ ಠಾಣೆಗಳ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು. ರೌಡಿಶೀಟರ್‌ಗಳ ಇತ್ತೀಚಿನ ಚಟುವಟಿಕೆಗಳು, ಸಂಪರ್ಕಗಳು ಹಾಗೂ ಕಾನೂನುಬಾಹಿರ ಚಟುವಟಿಕೆಗಳ ಕುರಿತು ಮಾಹಿತಿ ಸಂಗ್ರಹಿಸಲಾಯಿತು.

**ಸಾಮಾಜಿಕ ನ್ಯಾಯಕ್ಕಾಗಿ ಗದಗನಲ್ಲಿ ರಾಜ್ಯದ ಪ್ರತಿನಿಧಿಗಳ ಮಹಾಸಂಗಮ- ಸರ್ಕಾರದ ವಿರುದ್ಧ ಸ್ಲಂ ಹೋರಾಟ**

# ಜೂ.20ರಂದು ರಾಜ್ಯ ಸಮ್ಮೇಳನ



> "ಸ್ಲಂ ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸದೇ ಸರ್ಕಾರ ನಿರ್ಲಕ್ಷ್ಯ ಧೋರಣೆ ತಾಳಿದೆ. ಹಕ್ಕುಗಳಿಗಾಗಿ ಹೋರಾಟ ಅನಿವಾರ್ಯ"
> – ಇಮ್ತಿಯಾಜ್ ಮಾನ್ವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಲಂ ಜನರಿಗೆ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಗಳನ್ನು ಕಾಂಗ್ರೆಸ್ ಸರ್ಕಾರ ಈಡೇರಿಸದೇ ನಿರ್ಲಕ್ಷ್ಯ ಮಾಡುತ್ತಿದೆ ಎಂದು ಆರೋಪಿಸಿ, ಸ್ಲಂ ಜನರ ಸಾಮಾಜಿಕ ನ್ಯಾಯ ಮತ್ತು ಸಂವಿಧಾನಬದ್ಧ ಹಕ್ಕುಗಳಿಗಾಗಿ ಜೂನ್ 20ರಂದು ಗದಗ ನಗರದ ಲಾಯನ್ಸ್ ಭವನದಲ್ಲಿ ರಾಜ್ಯಮಟ್ಟದ ಪ್ರತಿನಿಧಿಗಳ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಇಮ್ತಿಯಾಜ್ ಆರ್. ಮಾನ್ವಿ ಹೇಳಿದರು.

ನಗರದ ರಾಜೋಟೇಶ್ವರ ನಗರ ಸ್ಲಂ ಪ್ರದೇಶದಲ್ಲಿ ನಡೆದ ಜಿಲ್ಲಾ ಸಮಿತಿ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಭರವಸೆಯೊಂದಿಗೆ ಅಧಿಕಾರಕ್ಕೆ ಬಂದ ಸರ್ಕಾರ ಮೂರು ವರ್ಷ ಕಳೆದರೂ ಸ್ಲಂ ನಿವಾಸಿಗಳ ಸಮಸ್ಯೆಗಳಿಗೆ ಸ್ಪಂದಿಸಿಲ್ಲ ಎಂದು ಆರೋಪಿಸಿದರು.

ಸ್ಲಂ ಜನರಿಗೆ ವಸತಿ, ಮೂಲಸೌಕರ್ಯ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳನ್ನು ತಕ್ಷಣ ಜಾರಿಗೆ ತರಬೇಕು. ಈ ಕುರಿತು ಸರ್ಕಾರದ ಗಮನ ಸೆಳೆಯಲು ರಾಜ್ಯಮಟ್ಟದ ಸಮ್ಮೇಳನ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಮೌಲಾಸಾಬ ಗಚ್ಚಿ, ಇಬ್ರಾಹಿಂ ಮುಲ್ಲಾ, ಪರವೀನಬಾನು ಹವಾಲ್ದಾರ, ಶರಣಪ್ಪ ಸೂಡಿ, ಮೆಹಬೂಬಸಾಬ ಬಳ್ಳಾರಿ, ಪುಷ್ಪಾ ಬಿಜಾಪೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಸೇವಾ ಅವಧಿಯಲ್ಲಿ ವಿಭಿನ್ನ ಹೆಜ್ಜೆ ಗುರುತು ಮೂಡಿಸಲಿ ಎಂದ ಡಾ. ಬಸವರಾಜ ಧಾರವಾಡ**

# ನೂತನ ಮುಖ್ಯೋಪಾಧ್ಯಾಯ ಹಂಜಗಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಿ.ಎಸ್. ಪಾಟೀಲ ಬಾಲಕರ ಪ್ರೌಢಶಾಲೆಯ ನೂತನ ಮುಖ್ಯೋಪಾಧ್ಯಾಯರಾಗಿ ಬಡ್ತಿ ಹೊಂದಿದ ಎನ್.ಎಸ್. ಹಂಜಗಿ ಅವರಿಗೆ ಸನ್ಮಾನಿಸಲಾಯಿತು.

ಸ್ನೇಹಿತರೊಂದಿಗೆ ತಮ್ಮ ನಿವಾಸಕ್ಕೆ ಆಗಮಿಸಿದ್ದ ಎನ್. ಎಸ್. ಹಂಜಗಿ ಅವರನ್ನು ಸನ್ಮಾನಿಸಿ ಮಾತನಾಡಿದ ಸಾಂಸ್ಕೃತಿಕ ಚಿಂತಕ ಡಾ. ಬಸವರಾಜ ಧಾರವಾಡ, ತಮ್ಮ ಸೇವಾ ಅವಧಿಯಲ್ಲಿ ಉತ್ತಮ ಆಡಳಿತ ನೀಡಿ ವಿಶಿಷ್ಟ ಹೆಜ್ಜೆ



ಗುರುತು ಮೂಡಿಸಲಿ ಎಂದು ಹಾರೈಸಿದರು.

ಪ್ರಸ್ತುತ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸವಾಲುಗಳಿದ್ದು, ಗುಣಮಟ್ಟದ ಶಿಕ್ಷಣದತ್ತ ಹೆಚ್ಚಿನ ಗಮನ ಹರಿಸಬೇಕು. ಮಕ್ಕಳ ಹಿತದೃಷ್ಟಿಯಿಂದ ವಿಶೇಷ ಯೋಜನೆಗಳನ್ನು ರೂಪಿಸಿ

> "ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಿದರೆ ಶಾಲೆಯ ಗೌರವ ಮತ್ತಷ್ಟು ಎತ್ತರಕ್ಕೇರುತ್ತದೆ"
> – ಡಾ. ಬಸವರಾಜ ಧಾರವಾಡ

ಶಾಲೆಯ ಕೀರ್ತಿಯನ್ನು ಹೆಚ್ಚಿಸಬಹುದಾಗಿದೆ ಎಂದು ಸಲಹೆ ನೀಡಿದರು.

ತಮ್ಮ ಮೂರು ದಶಕಗಳ ಅನುಭವವನ್ನು ಬಳಸಿ ಶಿಕ್ಷಣ ಇಲಾಖೆ, ಆಡಳಿತ ಮಂಡಳಿ ಹಾಗೂ ಹಿತೈಷಿಗಳ ಸಲಹೆ ಪಡೆದು ಶಾಲೆಯ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಹೇಳಿದರು.

ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ ಮಾತನಾಡಿ, ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ಸಮರ್ಪಕ ಸೇವೆ ಸಲ್ಲಿಸಿದರೆ ಸಮಾಜ ಹಾಗೂ ವಿದ್ಯಾರ್ಥಿಗಳು ಸದಾ ನೆನಪಿಟ್ಟುಕೊಳ್ಳುತ್ತಾರೆ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಹಿರಿಯ ಶಿಕ್ಷಕರಾದ ಎನ್.ವಿ. ಪಾಟೀಲ, ಎಂ.ಎಸ್. ಸರ್ವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka